# ಅನಂತ ಜನಶಕ್ತಿ

ಸಂಪಾದಕ: ಎಸ್.ವೆಂಕಟೇಸುಲು
EDITOR : S VENKATESULU

ANANTHA JANA SAKTHI   KANNADA DAILY   ಕನ್ನಡ ದಿನಪತ್ರಿಕೆ

ಸಂಪುಟ : 01   ಸಂಚಿಕೆ : 60   ರಿ.ನಂ : ಕೆಎನ್‌ಎಎನ್ / 26 / ಎ5487   ಬಳ್ಳಾರಿ   ಗುರುವಾರ   ದಿನಾಂಕ : 10-09-2026   ಪುಟ : 04   ಬೆಲೆ : 2-00


## ಶತಕದತ್ತ ಈರುಳ್ಳಿ ಬೆಲೆ



ಬೆಂಗಳೂರು : ಈರುಳ್ಳಿ ಹೆಚ್ಚಾಗಿ ಕತ್ತರಿಸಿದಾಗ ಮಾತ್ರ ಕಣ್ಣಲ್ಲಿ ನೀರು ಬರುವುದು ಸಹಜ. ಆದರೆ ಇದೀಗ ಈರುಳ್ಳಿ ಖರೀದಿಸುವಾಗಲೂ ಗ್ರಾಹಕರ ಕಣ್ಣಲ್ಲಿ ನೀರು ಬರುವಂತಾಗಿದೆ.ದಿನದಿಂದ ದಿನಕ್ಕೆ ಅಗತ್ಯ ವಸ್ತುಗಳ ಬೆಲೆ ಗಗನಕ್ಕೇರುತ್ತಿರುವ ಬೆನ್ನಲ್ಲೇ, ಈರುಳ್ಳಿ ಬೆಲೆಯೂ ಶತಕದತ್ತ ಮುನ್ನುಗ್ಗುತ್ತಿದ್ದು, ಗ್ರಾಹಕರ ಜೇಬಿಗೆ ಹೊರೆಯಾಗುತ್ತಿದೆ.

ಈರುಳ್ಳಿ ಬೆಲೆ ನಿಯಂತ್ರಿಸುವ ಉದ್ದೇಶದಿಂದ ಕೇಂದ್ರ ಸರ್ಕಾರ ರಿಯಾಯಿತಿ ದರದಲ್ಲಿ ಈರುಳ್ಳಿ ಮಾರಾಟ ಆರಂಭಿಸಿದ್ದರೂ, ಮಾರುಕಟ್ಟೆಯಲ್ಲಿ ಬೆಲೆ ಇಳಿಕೆಯಾಗುವ ಬದಲು ಏರಿಕೆಯಾಗುತ್ತಲೇ ಇದೆ. ಸದ್ಯ ಚಿಲ್ಲರೆ ಮಾರುಕಟ್ಟೆಯಲ್ಲಿ ಗುಣಮಟ್ಟಕ್ಕೆ ಅನುಗುಣವಾಗಿ ಕೆ.ಜಿ. ಈರುಳ್ಳಿ ದರ 70 ರೂ. ದಾಟಿದೆ.

ಮಾರುಕಟ್ಟೆಯಲ್ಲಿ ಎ ದರ್ಜೆಯ ಈರುಳ್ಳಿ ಕ್ವಿಂಟಾಲ್‌ಗೆ 5,300ರಿಂದ 6,000 ರೂ.ವರೆಗೆ ಮಾರಾಟವಾಗುತ್ತಿದೆ. ಕಳೆದ ತಿಂಗಳು ಕ್ವಿಂಟಾಲ್‌ಗೆ 4,000ರಿಂದ 4,500 ರೂ. ಆಸುಪಾಸಿನಲ್ಲಿದ್ದ ದರ ಸೆಪ್ಟೆಂಬರ್‌ನಲ್ಲಿ 1,000ರಿಂದ 1,500 ರೂ.ವರೆಗೆ

2ನೇ ಪುಟಕ್ಕೆ...

## ಇದು ಆರಂಭವಷ್ಟೆ.. ನೋಡ್ತಿರಿ.. ನನ್ನ ಮೇಲೆ, ಡಿಕೆಶಿ ಮೇಲೆ ಕೂಡ ಇಡಿ ದಾಳಿಯಾಗಬಹುದು: ಪ್ರಿಯಾಂಕ್ ಖರ್ಗೆ



ಬೆಂಗಳೂರು: ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಮತ್ತು ಅವರ ಕುಟುಂಬಸ್ಥರ ನಿವಾಸಗಳ ಮೇಲೆ ಇಂದು ಜಾರಿ ನಿರ್ದೇಶನಾಲಯ ದಾಳಿಯನ್ನು ರಾಜಕೀಯವಾಗಿ ದುರುದ್ದೇಶಪೂರಿತ, ಇದು ವಿರೋಧ ಪಕ್ಷಗಳನ್ನು ಗುರಿಯಾಗಿಸಿಕೊಂಡು ನಡೆಸಿದ ದಾಳಿ ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಆರೋಪಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರ ಜೊತೆ ಮಾತನಾಡಿದ ಅವರು, ಇಂತಹ ದಾಳಿಗಳನ್ನು ಮಾಡಿಸಿ ಕೇಂದ್ರ ಸರ್ಕಾರ ನಮ್ಮನ್ನು ಬೆದರಿಸಲು ಸಾಧ್ಯವಿಲ್ಲ. ಕರ್ನಾಟಕದಲ್ಲಿ ಬಿಜೆಪಿ ಸ್ಥಿತಿ ಡೋಲಾಯಮಾನವಾಗಿದೆ. ಮುಂದಿನ ವಿಧಾನಸಭೆ ಚುನಾವಣೆಯನ್ನು ಕೇಂದ್ರ ಸರ್ಕಾರ ಸಿಬಿಐ, ಇಡಿ, ಐಟಿಯೊಂದಿಗೆ ಮಾಡಲು ಯೋಜಿಸುತ್ತಿದೆಯೇ ಹೊರತು ಬಿಜೆಪಿ ನಾಯಕರೊಂದಿಗೆ ಅಲ್ಲ ಎಂದು ಟೀಕಿಸಿದರು.

## ಪೊಲೀಸ್ ಗಸ್ತು ವಾಹನವೇ ಕಳವು! ಜನರಿಗೆ ರಕ್ಷಣೆ ಇನ್ನು ಎಲ್ಲಿ?




ಕರೀಂನಗರ: ಪೊಲೀಸ್ ಠಾಣೆಯೊಂದರಲ್ಲಿ ನಿಲ್ಲಿಸಲಾಗಿದ್ದ ಗಸ್ತು ವಾಹನವೇ ಕಳುವಾಗಿರುವ ಘಟನೆ ನಡೆದಿದೆ. ಉತ್ತರ ಪ್ರದೇಶದ ಕರೀಂನಗರದಲ್ಲಿ ಈ ಘಟನೆ ನಡೆದಿದ್ದು, ಜನರಿಗೆ ರಕ್ಷಣೆ ಇನ್ನು ಎಲ್ಲಿ? ಎಂಬ ಅನುಮಾನ ಶುರುವಾಗಿದೆ. ಈ ಘಟನೆಗೆ ಸಂಬಂಧಿಸಿದಂತೆ ಓರ್ವ ವ್ಯಕ್ತಿಯೊಬ್ಬನನ್ನು ಬಂಧಿಸಲಾಗಿದೆ ಎಂದು ಪೊಲೀಸರು ಬುಧವಾರ ತಿಳಿಸಿದ್ದಾರೆ. ಕಳುವಾಗಿದ್ದ ವಾಹನವನ್ನು ಮಂಗಳವಾರ ಮುಂಜಾನೆ ಪತ್ತೆಹಚ್ಚಿ ವಶಕ್ಕೆ ಪಡೆಯಲಾಯಿತು ಎಂದು ಅವರು ಹೇಳಿದ್ದಾರೆ.

ಕರ್ತವ್ಯದ ನಂತರ ಗಸ್ತು ತಂಡ 'ಇನೋವಾ' ಕಾರನ್ನು ಕರೀಂನಗರ ಗ್ರಾಮಾಂತರ ಪೊಲೀಸ್ ಠಾಣೆಯ ಆವರಣದಲ್ಲಿ ನಿಲ್ಲಿಸಿತ್ತು. ಬಳಿಕ ಠಾಣೆ-ಯ ಆವರಣದಿಂದ ಕಾರು ನಾಪತ್ತೆಯಾಗಿರುವುದು ಕಂಡುಬಂದಿತು, ಇದರಿಂದಾಗಿ ಪೊಲೀಸರು ತನಿಖೆ ಆರಂಭಿಸಿದ್ದಾರೆ.

# "ಯಾರೇ ಗಿಮಿಕ್ ಎಂದರೂ ಇದು ಅದ್ಭುತ ಕೆಲಸ":

## ಎಪಿಎಂಸಿ ಮಾರುಕಟ್ಟೆಗೆ ಡಿ.ಕೆ ಶಿವಕುಮಾರ್ ಭೇಟಿಗೆ ಹೈಕೋರ್ಟ್ ಶ್ಲಾಘನೆ

ಬೆಂಗಳೂರು: ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಮಂಗಳವಾರ ಯಶವಂತಪುರದ ಎಪಿಎಂಸಿ ಮಾರುಕಟ್ಟೆಗೆ ದಿಢೀರ್ ಭೇಟಿ ನೀಡಿ ಕಾರ್ಮಿಕರ ಬವಣೆ ಆಲಿಸಿರುವುದಕ್ಕೆ ಇದೀಗ ಮೆಚ್ಚುಗೆ ವ್ಯಕ್ತವಾಗಿದ್ದು, ಕರ್ನಾಟಕ ಹೈಕೋರ್ಟ್ ಸಿಎಂ ನಡೆಯನ್ನು ಬುಧವಾರ ಶ್ಲಾಘಿಸಿದೆ.

ಕಾರ್ಮಿಕರಿಗೆ ಸಂಬಂಧಿಸಿದ ಪ್ರಕರಣವೊಂದರ ವಿಚಾರಣೆ ನಡೆಸಿದ ನ್ಯಾಯಮೂರ್ತಿ ವಿ. ಶ್ರೀಶಾನಂದ ಅವರಿದ್ದ ಏಕಸದಸ್ಯ ಪೀಠ, 'ಎಪಿಎಂಸಿ ಮಾರುಕಟ್ಟೆಗೆ ಭೇಟಿ ನೀಡಿರುವ ಮುಖ್ಯಮಂತ್ರಿಗಳ ನಡೆಯನ್ನು ಕೆಲವರು ಗಿಮಿಕ್ ಎಂದು ಕರೆಯಬಹುದು. ಆದರೆ, ಇದು ಖಂಡಿತವಾಗಿಯೂ ಅದ್ಭುತವಾದ ಕೆಲಸ' ಎಂದು ಹೇಳಿದೆ.



'ಎಪಿಎಂಸಿಗೆ ಭೇಟಿ ನೀಡಿದ್ದ ವೇಳೆ ಶಿವಕುಮಾರ್ ಅವರು ಮಾರುಕಟ್ಟೆಯಲ್ಲಿರುವ ಈರುಳ್ಳಿ, ಬೆಳ್ಳುಳ್ಳಿ ಮತ್ತು ಶುಂಠಿಗಳ ಗುಣಮಟ್ಟ ಮತ್ತು ದರವನ್ನು ಪರಿಶೀಲಿಸಿದ್ದಾರೆ. ವ್ಯಾಪಾರಿಗಳ ಜೊತೆ ಮತ್ತು ಕಾರ್ಮಿಕ ಹೆಣ್ಣು ಮಕ್ಕಳ ಜೊತೆ ಕೂತು ಅವರ ಕಷ್ಟಸುಖ ಆಲಿಸಿದ್ದಾರೆ.

2ನೇ ಪುಟಕ್ಕೆ...

# ತಾಕತ್ತಿದ್ರೆ ಕೆಪಿಎಸ್‌ಸಿ ಹಗರಣ ವಿರುದ್ಧ ಹೋರಾಡ್ಲಿ : ಯತ್ನಾಳ್





ಬೆಂಗಳೂರು: ಬಿವೈ ವಿಜಯೇಂದ್ರ ಅವರನ್ನು ರಾಜ್ಯಾಧ್ಯಕ್ಷ ಸ್ಥಾನದಿಂದ ತೆಗೆಯುವುದು ಫಿಕ್ಸ್ ಆದ ಮೇಲೆ ಪಾದಯಾತ್ರೆ ಆರಂಭವಾಗಿದೆ ಆಗಿದೆ ಎಂದು ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹೇಳಿದ್ದಾರೆ.


ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆರ್ ಅಶೋಕ್, ಸುನೀಲ್ ಕುಮಾರ್ ಎಲ್ಲರೂ ಸದನದ ಬಾವಿಗೆ ಇಳಿದು ಹೋರಾಟ ಮಾಡಿದ್ದರು. ಆಗ ವಿಜಯೇಂದ್ರ 5 ನಿಮಿಷ ಬಾವಿಯಲ್ಲಿ ನಿಲ್ಲಲ್ಲಿಲ್ಲ. ಬರಿ ಪುಕ್ಸಟ್ಟೆ

2ನೇ ಪುಟಕ್ಕೆ...

# ಕರ್ನಾಟಕದ ಬರಪೀಡಿತ ಪಟ್ಟಿಗೆ ಇನ್ನೂ 25 ತಾಲೂಕುಗಳು ಸೇರ್ಪಡೆ: ಡಾ ಜಿ.ಪರಮೇಶ್ವರ್

ಬೆಂಗಳೂರು: ಕರ್ನಾಟಕದ ಬರಪೀಡಿತ ತಾಲೂಕುಗಳ ಪಟ್ಟಿಗೆ ಇನ್ನೂ 25 ತಾಲೂಕುಗಳು ಸೇರ್ಪಡೆಯಾಗುವ ಸಾಧ್ಯತೆಯಿದ್ದು, ಬರ ಪರಿಸ್ಥಿತಿಯ ಎರಡನೇ ಹಂತದ ಮೌಲ್ಯಮಾಪನವನ್ನು ಶೀಘ್ರದಲ್ಲೇ ಪೂರ್ಣಗೊಳಿಸಲಾಗುವುದು ಎಂದು ಉಪ ಮುಖ್ಯಮಂತ್ರಿ ಹಾಗೂ ಕಂದಾಯ ಸಚಿವ ಡಾ. ಜಿ. ಪರಮೇಶ್ವರ ತಿಳಿಸಿದ್ದಾರೆ.

2ನೇ ಪುಟಕ್ಕೆ...



# ಡಿಕೆಶಿ ಆಡಳಿತ ಶತಕ:

## ನಿರ್ಧಾರಗಳು-ಘೋಷಣೆಗಳ ಪಟ್ಟಿ ಬಿಡುಗಡೆ



ಬೆಂಗಳೂರು : ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡು ನಾಳೆಗೆ 100 ದಿನ ಪೂರ್ಣಗೊಳ್ಳಲಿರುವ ಹಿನ್ನೆಲೆಯಲ್ಲಿ, ಈ ಅವಧಿಯಲ್ಲಿ ಸರ್ಕಾರ ಕೈಗೊಂಡಿರುವ ಹಲವು ಮಹತ್ವದ ನಿರ್ಧಾರಗಳು ಹಾಗೂ ಘೋಷಣೆಗಳ ಪಟ್ಟಿಯನ್ನು ಬಿಡುಗಡೆ ಮಾಡಲಾಗಿದೆ.

ರಾಜ್ಯದ ಎಲ್ಲ ವಿದ್ಯಾರ್ಥಿಗಳಿಗೆ ಉಚಿತ ಬಸ್‌ಪಾಸ್ ವಿತರಣೆ, 72 ಸಾವಿರ ಸರ್ಕಾರಿ ಹುದ್ದೆಗಳ ನೇಮಕಾತಿಗೆ ಕಾಲಮಿತಿ ನಿಗದಿ, ಬೆಂಗಳೂರಿನ ರಸ್ತೆಗಳನ್ನು ಗುಂಡಿಮುಕ್ತಗೊಳಿಸಲು 2 ಸಾವಿರ ಕೋಟಿ ರೂ.ಗಳ ಯೋಜನೆ, ಪ್ರಜಾಸೇವೆ ಸಚಿವಾಲಯ ಆರಂಭ ಸೇರಿದಂತೆ ಹಲವು ಕ್ರಮಗಳನ್ನು ಕೈಗೊಂಡಿರುವುದನ್ನು ಸರ್ಕಾರ ಪ್ರಸ್ತಾಪಿಸಿದೆ. ಪ್ರಮುಖವಾಗಿ ಸಾಮಾಜಿಕ ಮತ್ತು ಆರ್ಥಿಕ ಸಮೀಕ್ಷೆ ಜಾರಿಗೊಳಿಸುವ ಮೂಲಕ ಸಾಮಾಜಿಕ ನ್ಯಾಯ ಒದಗಿಸಲು ಸರ್ಕಾರ ಬದ್ಧವಾಗಿದೆ ಎಂದು ಘೋಷಿಸಲಾಗಿದೆ.

ರಾಜ್ಯದ ಎಲ್ಲ ಪಂಚಾಯಿತಿಗಳು ಹಾಗೂ ವಾರ್ಡ್‌ಗಳಲ್ಲಿ ಭಾರತ್ ಜೋಡೋ ಯುವಕರ ಸಂಘ ಸ್ಥಾಪನೆ, 2,500 ಚದರ ಅಡಿವರೆಗಿನ ನೂತನ ವಸತಿ ಕಟ್ಟಡಗಳಿಗೆ ಶಾಶ್ವತ ವಿದ್ಯುತ್ ಸಂಪರ್ಕ ಪಡೆಯಲು ಒಸಿ ವಿನಾಯಿತಿ, ರಾಜ್ಯಾದ್ಯಂತ ಬಿ ಖಾತಾದಿಂದ ಎ ಖಾತೆಗೆ ಪರಿವರ್ತನೆಗೆ ಕ್ರಮ

2ನೇ ಪುಟಕ್ಕೆ..

# ಅಪ್ಪನಿಗೆ ಹುಟ್ಟಿದ್ರೆ ಬೂಟಿನಲ್ಲಿ ಹೊಡಿಲಿ : ಹರೀಶ್

ದಾವಣಗೆರೆ: ಸಚಿವ ಎಸ್‌ಎಸ್ ಮಲ್ಲಿಕಾರ್ಜುನ ಹರಿಹರ ಬಿಜೆಪಿ ಶಾಸಕ ಬಿಪಿ ಹರೀಶ್ ನಡುವೆ ಜಗಳ ತಾರಕ-ಕ್ಕೇರಿದ್ದು, ಸಾರ್ವಜನಿಕವಾಗಿ ಅವಾಚ್ಯ ಪದಗಳ ಬಳಿಸಿ ಬೈಯ್ಯುವ ಹಂತಕ್ಕೆ ಹೋಗಿದೆ. ಸಚಿವರು ಅವಾಚ್ಯ ಪದ ಬಳಕೆಯಿಂದ ಬೇಸರಗೊಂಡ ಶಾಸಕರು ಅಪ್ಪನಿಗೆ ಹುಟ್ಟಿದ್ರೆ ಬೂಟಿನಲ್ಲಿ ಹೊಡೆಯಲಿ ಎಂದು ಸವಾಲು ಹಾಕಿದ್ದಾರೆ.

ಭದ್ರಾ ನೀರಿನ ವಿಚಾರಕ್ಕೆ ರೈತರು ಕೇಳಿದ ಹಿನ್ನೆಲೆಯಲ್ಲಿ ಸಿಡಿಮಿಡಿಗೊಂಡ

2ನೇ ಪುಟಕ್ಕೆ...





# ದುರ್ಬಲ ಮುಂಗಾರು, ಬರದ ಆತಂಕ:

## ರಾಜ್ಯದಲ್ಲಿ ವಿದ್ಯುತ್ ಕೊರತೆಯಾಗಲ್ಲ- ಸಚಿವ ಕೆ.ಜೆ ಜಾರ್ಜ್ ಭರವಸೆ..!



ಬೆಂಗಳೂರು: ರಾಜ್ಯದಲ್ಲಿ ಬರ ಪರಿಸ್ಥಿತಿ ಎದುರಾಗಿದ್ದರೂ, ವಿದ್ಯುತ್ ಪೂರೈಕೆಯಲ್ಲಿ ಯಾವುದೇ ವ್ಯತ್ಯಯವಾಗದಂತೆ ಹಾಗೂ ಕೊರತೆ ಉಂಟಾಗದಂತೆ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಸಚಿವ ಕೆ.ಜೆ. ಜಾರ್ಜ್ ಮಂಗಳವಾರ ತಿಳಿಸಿದ್ದಾರೆ. ಭಾರತ್ ನವೀಕರಿಸಬಹುದಾದ ಇಂಧನ ಶೃಂಗಸಭೆ ಮತ್ತು ಪ್ರದರ್ಶನ-2026ರ ಬೆಂಗಳೂರಿನ ರೋಡ್‌ಶೋ ಉದ್ಘಾಟನಾ ಕಾರ್ಯಕ್ರಮದ ಸಂದರ್ಭದಲ್ಲಿ ಮಾತನಾಡಿದ ಅವರು, ಭವಿಷ್ಯದ ವಿದ್ಯುತ್ ಬೇಡಿಕೆಯನ್ನೂ ಗಮನದಲ್ಲಿಟ್ಟುಕೊಂಡು ಸಮಗ್ರ ಯೋಜನೆ ಸಿದ್ಧಪಡಿಸುವಂತೆ ಇಲಾಖೆಗೆ ಸೂಚಿಸಲಾಗಿದೆ ಎಂದು ಹೇಳಿದರು.

ಕಳೆದ ಬೇಸಿಗೆಯಲ್ಲಿ ವಿದ್ಯುತ್ ವಿನಿಮಯ ಒಪ್ಪಂದಗಳ ಮೂಲಕ ಉತ್ತರ ಪ್ರದೇಶ, ಪಂಜಾಬ್ ಮತ್ತು ಹರಿಯಾಣ

2ನೇ ಪುಟಕ್ಕೆ...

## ಎಸ್‌ಐಆರ್: ಕ್ಲೇಮು, ಆಕ್ಷೇಪಗಳ ಪಟ್ಟಿ ಪ್ರಕಟಿಸಿದ ಮುಖ್ಯ ಚುನಾವಣಾಧಿಕಾರಿ ಕಚೇರಿ




ಬೆಂಗಳೂರು: ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಭಾಗವಾಗಿ ಪ್ರಕಟಿಸಿರುವ ಕರಡು ಮತದಾರರ ಪಟ್ಟಿಗೆ ಸಲ್ಲಿಕೆಯಾಗಿರುವ ಕ್ಲೇಮು ಮತ್ತು ಆಕ್ಷೇಪಗಳ ಪಟ್ಟಿಯನ್ನು ರಾಜ್ಯ ಮುಖ್ಯ ಚುನಾವಣಾಧಿಕಾರಿ ಕಚೇರಿಯು ಪ್ರಕಟಿಸಿದೆ.

ರಾಜ್ಯ ಮುಖ್ಯ ಚುನಾವಣಾಧಿಕಾರಿ ಕಚೇರಿಯ ಜಾಲತಾಣದಲ್ಲಿ ಈ ಪಟ್ಟಿ ಲಭ್ಯವಿದೆ. ಆಯಾ ವಿಧಾನಸಭಾ ಕ್ಷೇತ್ರವಾರು ಪಟ್ಟಿಗಳನ್ನು ಪಿಡಿಎಫ್ ಸ್ವರೂಪದಲ್ಲಿ ಅಪ್‌ಲೋಡ್ ಮಾಡಲಾಗಿದೆ. ಮತದಾರರು ಜಾಲತಾಣಕ್ಕೆ ಭೇಟಿ ನೀಡಿ, ಜಿಲ್ಲೆ ಮತ್ತು ವಿಧಾನಸಭಾ ಕ್ಷೇತ್ರವನ್ನು ಆಯ್ಕೆ ಮಾಡಿಕೊಂಡು ಕ್ಲೇಮು ಮತ್ತು ಆಕ್ಷೇಪಗಳ ಪಟ್ಟಿಯನ್ನು ಡೌನ್‌ಲೋಡ್ ಮಾಡಬಹುದಾಗಿದೆ.

ಹೊಸದಾಗಿ ನೋಂದಣಿ ಮಾಡಿಸಲು ಸಲ್ಲಿಸಿರುವ ಅರ್ಜಿಗಳನ್ನು (ಅರ್ಜಿ ನಮೂನೆ-6) ಫಾರಂ-9ರ ಪಟ್ಟಿಯಲ್ಲಿ ಪ್ರಕಟಿಸಲಾಗಿದೆ. ಸ್ವತಃ ಮತದಾರರು ತಮ್ಮ ಹೆಸರು ಡಿಲೀಟ್ ಮಾಡಿಸಲು ಮತ್ತು ಇತರರ ಮತನೋಂದಣಿಯನ್ನು ಡಿಲೀಟ್ ಮಾಡಿಸಲು ಅನ್ಯ ವ್ಯಕ್ತಿಗಳು ಸಲ್ಲಿಸಿದ ಅರ್ಜಿಗಳನ್ನು

2ನೇ ಪುಟಕ್ಕೆ...

## ಅಬಕಾರಿ ಅಕ್ರಮ ಕೇಸ್: ಸಚಿವ ಸತೀಶ್ ಜಾರಕಿಹೊಳಿ ಮನೆ ಮೇಲೆ ಇಡಿ ದಾಳಿ!



ಬೆಂಗಳೂರು: ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರ ಬೆಂಗಳೂರಿನ ಡಾಲರ್ಸ್ ಕಾಲೋನಿ ನಿವಾಸದ ಮೇಲೆಯೇ ಬೆಳ್ಳಂಬೆಳಗ್ಗೆ ಇಡಿ ಅಧಿಕಾರಿಗಳು ದಿಢೀರ್ ದಾಳಿ ನಡೆಸಿ ಬಿಗ್ ಶಾಕ್ ನೀಡಿದ್ದಾರೆ

ಬೆಂಗಳೂರು, ಬೆಳಗಾವಿ, ಮಹಾರಾಷ್ಟ್ರ ಸೇರಿದಂತೆ 15 ಕಡೆ ದಾಳಿ ನಡೆದಿದೆ. 18 ಅನಧಿಕೃತ ಲೈಸೆನ್ಸ್ ಕೊಡುವುದಕ್ಕೆ ಸತೀಶ್ ಜಾರಕಿಹೊಳಿ ಸಹಾಯ ಮಾಡಿದ್ದರೆಂಬ ಆರೋಪ ಕೇಳಿ ಬಂದಿದೆ.

ಇಂದು ಬೆಳಿಗ್ಗೆ ಎರಡು ಪ್ರತ್ಯೇಕ ಕಾರುಗಳಲ್ಲಿ ಆಗಮಿಸಿದ ಇಡಿ ಅಧಿಕಾರಿಗಳ ತಂಡವು ಸಚಿವರ ಮನೆಯೊಳಗೆ ಪ್ರವೇಶಿಸಿ ಪರಿಶೀಲನೆ ಆರಂಭಿಸಿದೆ. ಅಬಕಾರಿ ಇಲಾಖೆಯಲ್ಲಿ ನಡೆದಿದೆ ಎನ್ನಲಾದ ಭ್ರಷ್ಟಾಚಾರ, ಬಾರ್ ಲೈಸೆನ್ಸ್ ಅಕ್ರಮ ಹಾಗೂ ಹವಾಲಾ ಹಣಕಾಸು ವ್ಯವಹಾರದ ಲಿಂಕ್ ಆಧಾರದ ಮೇಲೆ

2ನೇ ಪುಟಕ್ಕೆ...

# 'ಯಾರೇ ಗಿಮಿಕ್ ಎಂದರೂ ಇದು ಅದ್ಭುತ ಕೆಲಸ':

## ಎಪಿಎಂಸಿ ಮಾರುಕಟ್ಟೆಗೆ ಡಿ.ಕೆ ಶಿವಕುಮಾರ್ ಭೇಟಿಗೆ ಹೈಕೋರ್ಟ್ ಶ್ಲಾಘನೆ

ಇದೆಲ್ಲವೂ ಸಂತಸದ ವಿಷಯ' ಎಂದು ನ್ಯಾಯಾಲಯ ತಿಳಿಸಿದೆ.

'ಇಂದು ಎಪಿಎಂಸಿ ಮಳಿಗೆಗಳು ಯಾರದೋ ಹೆಸರಿನಲ್ಲಿ ಮತ್ಯಾರೋ ಬಾಡಿಗೆದಾರನ ವಾಸ ಎನ್ನುವಂತಾಗಿದೆ. ಊರಲ್ಲಿರುವ ಎಪಿಎಂಸಿಗಳು ಸತ್ತು ಹೋಗಿವೆ' ಎಂದು ನ್ಯಾಯಪೀಠ ಅಸಮಾಧಾನ ವ್ಯಕ್ತಪಡಿಸಿದೆ.

ಕಾರ್ಮಿಕರನ್ನು ಬಂಡವಾಳಶಾಹಿಗಳ ಕಪಿಮುಷ್ಟಿಯಿಂದ ಮುಕ್ತಗೊಳಿಸಬೇಕು. ಕಾರ್ಮಿಕರ ಹಿತರಕ್ಷಣೆಗಾಗಿಯೇ ಇರುವ ಕಾನೂನುಗಳನ್ನು ಚಾಚೂ ತಪ್ಪದೆ ಪಾಲಿಸಬೇಕು. ವಿಷ ಕುಡಿ-ದು ಸಾಯಬಾರದು ಎಂದರೆ ಹೇಗೆ? ಕಾರ್ಮಿಕರಿಗೆ ಕನಿಷ್ಠ ವೇತನ ನೀಡಬೇಕು. ಕನಿಷ್ಠ ವೇತನ ಜಾರಿಯಲ್ಲಿ ಯಾವುದೇ ತಾಂತ್ರಿಕ ಅಡಚಣೆಗಳು ಕಾಣಬಾರದು. ಕಾನೂನನ್ನು ನೀವು ಗೌರವಿಸಿದರೆ ಅದು ನಿಮ್ಮನ್ನು ರಕ್ಷಿಸುತ್ತದೆ' ಎಂದು ಅರ್ಜಿದಾರರ ಪರ ವಕೀಲರಿಗೆ ತಿಳಿಸಿತು.

ಯಶವಂತಪುರ ಎಪಿಎಂಸಿಗೆ ಮಂಗಳವಾರ ದಿಢೀರ್ ಭೇಟಿ ನೀಡಿ ರೈತರೊಂದಿಗೆ ಚರ್ಚಿಸಿದ ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಡಿಕೆ ಶಿವಕುಮಾರ್, ಸಣ್ಣ ಮಕ್ಕಳಿಂದ ಕೆಲಸ ಮಾಡಿಸುವುದನ್ನು ತಕ್ಷಣದಿಂದಲೇ ನಿಲ್ಲಿಸಬೇಕು. ಬಾಲಕಾರ್ಮಿಕರಿಂದ ದುಡಿಸುತ್ತಿರುವವರನ್ನು ತಕ್ಷಣವೇ ಬಂಧಿಸಿ ಪ್ರಕರಣ ದಾಖಲಿಸಲು ಜಿಲ್ಲಾಧಿಕಾರಿ ಹಾಗೂ ಪೊಲೀಸರಿಗೆ ಸೂಚನೆ ನೀಡಿದ್ದೇನೆ. ರಾಜ್ಯದ ಇತರೆ ಎಪಿಎಂಸಿಗಳಿಗೆ ಸಚಿವರುಗಳು ಭೇಟಿ ನೀಡಿ ಸಮಸ್ಯೆ ಹಾಗೂ ದೂರುಗಳನ್ನು ಸರಿಪಡಿಸಲು ಸೂಚಿಸಲಾಗುವುದು' ಎಂದು ಹೇಳಿದರು.

ಟಎಪಿಎಂಸಿ ಮಾರುಕಟ್ಟೆ ರೈತರು ಹಾಗೂ ವ್ಯಾಪಾರಸ್ಥರ ನಡುವಿನ ಕೊಂಡಿ. ಬೇರೆ ಯಾವುದೇ ಮಾರುಕಟ್ಟೆಗಿಂತಲೂ ಬೆಂಗಳೂರಿನ ಮಾರುಕಟ್ಟೆಯ ಬಗ್ಗೆ ರೈತರು ಸಂತುಷ್ಟರಾಗಿದ್ದಾರೆ. ಮಧ್ಯಪ್ರದೇಶದ ಇಂದೋರ್ ಸೇರಿದಂತೆ ದೇಶದ ವಿವಿಧ ಮಾರುಕಟ್ಟೆಗಳಿಂದ ಈರುಳ್ಳಿ, ಆಲೂಗಡ್ಡೆ ಮುಂತಾದ ಕೃಷಿ ಉತ್ಪನ್ನಗಳು ಇಲ್ಲಿಗೆ ಬರುತ್ತಿದ್ದು, ಇಲ್ಲಿನ ಉತ್ಪನ್ನಗಳಿಗೂ ಬೇರೆ ಉತ್ಪನ್ನಗಳಿಗೂ ಗುಣಮಟ್ಟದಲ್ಲಿ ಹಾಗೂ ರುಚಿಯಲ್ಲಿ ಸಾಕಷ್ಟು ವ್ಯತ್ಯಾಸವಿದೆ. ಹಲವು ಉತ್ಪನ್ನಗಳು ಮೂರು ತಿಂಗಳವರೆಗೆ ಹಾಳಾಗದೆ ಉಳಿದರೆ, ಇನ್ನು ಕೆಲವು ಒಂದು ತಿಂಗಳು ಉಳಿಯುವುದಿಲ್ಲ' ಎಂದರು.

# ದುರ್ಬಲ ಮುಂಗಾರು, ಬರದ ಆತಂಕ:

## ರಾಜ್ಯದಲ್ಲಿ ವಿದ್ಯುತ್ ಕೊರತೆಯಾಗಲ್ಲ- ಸಚಿವ ಕೆ.ಜೆ ಜಾರ್ಜ್ ಭರವಸೆ..!

ರಾಜ್ಯಗಳಿಂದ ಹೆಚ್ಚುವರಿ ವಿದ್ಯುತ್ ಖರೀದಿಸಲಾಗಿತ್ತು. ಮುಂದಿನ ದಿನಗಳಲ್ಲಿಯೂ ಇದೇ ರೀತಿಯಲ್ಲಿ ವಿದ್ಯುತ್ ಖರೀದಿಸಲಾಗುವುದು ಎಂದು ತಿಳಿಸಿದರು. ಅಗತ್ಯವಿದ್ದರೆ ಮುಕ್ತ ಮಾರುಕಟ್ಟೆಯಿಂದಲೂ ವಿದ್ಯುತ್ ಖರೀದಿಸಲಾಗುವುದು. ಇದಕ್ಕಾಗಿ ಎಷ್ಟೇ ವೆಚ್ಚವಾದರೂ ಸರ್ಕಾರ ಭರಿಸಲು ಸಿದ್ಧವಿದೆ ಎಂದು ಭರವಸೆ ನೀಡಿದರು.

ರಾಜ್ಯವು ಸಾಂಪ್ರದಾಯಿಕ ವಿದ್ಯುತ್ ಉತ್ಪಾದನಾ ಮೂಲಗಳ ಜತೆಗೆ ಸೌರ ಮತ್ತು ಪವನ ಶಕ್ತಿಯನ್ನೂ ಮೀರಿ ಬ್ಯಾಟರಿ ಸಂಗ್ರಹಣೆ, ಪಂಪ್ಡ್ ಸ್ಟೋರೇಜ್, ಹಸಿರು ಜಲಜನಕ, ಸ್ಮಾರ್ಟ್ ಸಂಚಾರ ಮತ್ತು ವಿದ್ಯುತ್ ವಾಹನಗಳತ್ತ ಗಮನ ಹರಿಸುತ್ತಿದೆ. ವಿದ್ಯುತ್ ಮೂಲಸೌಕರ್ಯವನ್ನು ಮತ್ತಷ್ಟು ಬಲಪಡಿಸಲಾಗುತ್ತಿದ್ದು, ಪ್ರಸಕ್ತ ಹಣಕಾಸು ವರ್ಷದಲ್ಲಿ 12 ವಿದ್ಯುತ್ ಉಪಕೇಂದ್ರಗಳನ್ನು ನಿರ್ಮಿಸಲಾಗುತ್ತಿದೆ. ಮುಂದಿನ ಮೂರು ವರ್ಷಗಳಲ್ಲಿ ಇನ್ನೂ 400ಕ್ಕೂ ಹೆಚ್ಚು ಉಪಕೇಂದ್ರಗಳನ್ನು ನಿರ್ಮಿಸುವ ಯೋಜನೆ ರೂಪಿಸಲಾಗುತ್ತಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಎಂಎನ್‌ಆರ್‌ಇ ಕಾರ್ಯದರ್ಶಿ ಸಂತೋಷ್ ಕುಮಾರ್ ಸಾರಂಗಿ ಮಾತನಾಡಿ, ನವೀಕರಿಸಬಹುದಾದ ಇಂಧನ ಘಟಕಗಳನ್ನು 18ರಿಂದ 24 ತಿಂಗಳೊಳಗೆ ಸ್ಥಾಪಿಸಬಹುದಾದರೂ, ಅಗತ್ಯ ಪ್ರಸರಣ ಮೂಲಸೌಕರ್ಯ ನಿರ್ಮಿಸಲು 3ರಿಂದ 5 ವರ್ಷಗಳ ಕಾಲ ಬೇಕಾಗುತ್ತದೆ ಎಂದು ಹೇಳಿದರು.

ವಿದ್ಯುತ್ ಗ್ರಿಡ್‌ಗೆ ಸಂಪರ್ಕ, ಇಂಧನ ಸಂಗ್ರಹಣೆ ಹಾಗೂ ಪ್ರಸರಣ ವ್ಯವಸ್ಥೆಯ ವಿಸ್ತರಣೆ ಸೇರಿದಂತೆ ಹಲವು ಅಂಶಗಳನ್ನು ಇದರಲ್ಲಿ ಪರಿಗಣಿಸಬೇಕಾಗುತ್ತದೆ ಎಂದು ಅವರು ವಿವರಿಸಿದರು. 2031ರ ವೇಳೆಗೆ ಭಾರತಕ್ಕೆ ಸುಮಾರು 239 ಗಿಗಾವ್ಯಾಟ್-ಗಂಟೆ ಬ್ಯಾಟರಿ ಇಂಧನ ಸಂಗ್ರಹಣೆಯ ಅಗತ್ಯವಿದೆ. ಗರಿಷ್ಠ ವಿದ್ಯುತ್ ಬೇಡಿಕೆಯ ಸಂದರ್ಭದಲ್ಲಿ ಉಂಟಾಗುವ ಸಮಸ್ಯೆಗಳನ್ನು ನಿಭಾಯಿಸಲು ಬ್ಯಾಟರಿ ಸಂಗ್ರಹಣೆ ಪ್ರಮುಖ ಪಾತ್ರ ವಹಿಸಲಿದೆ ಎಂದು ಹೇಳಿದರು.

ಶಿವಮೊಗ್ಗದಲ್ಲಿ ಪ್ರಸ್ತಾಪಿಸಿರುವ ಪಂಪ್ಡ್ ಸ್ಟೋರೇಜ್ ಯೋಜನೆ ಕುರಿತು ಮಾತನಾಡಿದ ಸಚಿವ ಕೆ.ಜೆ. ಜಾರ್ಜ್, ಯಾವುದೇ ಯೋಜನೆಯನ್ನು ಕೈಗೆತ್ತಿಕೊಳ್ಳುವ ಮೊದಲು ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ವನ್ಯಜೀವಿ ಮಂಡಳಿ ಹಾಗೂ ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯ ಸೇರಿದಂತೆ ಅಗತ್ಯ ಸಂಸ್ಥೆಗಳಿಂದ ಅನುಮತಿ ಪಡೆಯಲಾಗುತ್ತದೆ ಎಂದು ಹೇಳಿದರು.

# ಎಸ್‌ಐಆರ್: ಕ್ಲೇಮು, ಆಕ್ಷೇಪಗಳ ಪಟ್ಟಿ ಪ್ರಕಟಿಸಿದ ಮುಖ್ಯ ಚುನಾವಣಾಧಿಕಾರಿ ಕಚೇರಿ

(ಅರ್ಜಿ ನಮೂನೆ-7) ಫಾರಂ-10ರಲ್ಲಿ ಪ್ರಕಟಿಸಲಾಗಿದೆ.

ಹೆಸರು, ವಿಳಾಸ, ಜನ್ಮ ದಿನಾಂಕ ಮತ್ತಿತರ ವಿವರಗಳ ತಿದ್ದುಪಡಿಗಾಗಿ ಸಲ್ಲಿಸಿದ ಅರ್ಜಿಗಳನ್ನು (ಅರ್ಜಿ ನಮೂನೆ-8) ಫಾರಂ-11, ಫಾರಂ-11ಎ ಮತ್ತು ಫಾರಂ-11ಬಿ ಪಟ್ಟಿಗಳಲ್ಲಿ ಪ್ರಕಟಿಸಲಾಗಿದೆ. ಮತದಾರರು ತಾವು ಸಲ್ಲಿಸಿರುವ ಕ್ಲೇಮು ಮತ್ತು ಆಕ್ಷೇಪಗಳು ದಾಖಲಾಗಿವೆಯೇ ಎಂಬುದನ್ನು ಈ ಪಟ್ಟಿಗಳಲ್ಲಿ ಪರಿಶೀಲಿಸಿಕೊಳ್ಳಬಹುದಾಗಿದೆ.

ಮತದಾರರು ಸಲ್ಲಿಸಿದ ಕ್ಲೇಮು ಮತ್ತು ಆಕ್ಷೇಪಗಳ ಅರ್ಜಿಗಳನ್ನು ಮತದಾರರ ನೋಂದಣಾಧಿಕಾರಿ (ಇಆರ್‌ಒ) ವರ್ಗೀಕರಿಸಿದ ನಂತರವಷ್ಟೇ ಈ ಪಟ್ಟಿಯಲ್ಲಿ ಅರ್ಜಿಗಳು ಗೋಚರವಾಗುತ್ತವೆ. ಪ್ರತಿದಿನವೂ ಹೊಸ ಪಟ್ಟಿ ಪ್ರಕಟವಾಗುತ್ತೆ. ಈಗ ಸೆಪ್ಟೆಂಬರ್ 1ರಿಂದ ಸೆಪ್ಟೆಂಬರ್ 7ರವರೆಗಿನ ಪಟ್ಟಿಗಳು ಜಾಲತಾಣದಲ್ಲಿ ಲಭ್ಯವಿವೆ.

ಮತದಾರರಿಗೆ ಅರಿವಿಲ್ಲದೆ ಇತರರು ಅವರ ಮತ ಚೀಟಿ ಡಿಲೀಟ್ ಮಾಡಿಸಲು ಅರ್ಜಿ ಸಲ್ಲಿಸಿದ್ದರೂ ಅದು ಈ ಪಟ್ಟಿಯಲ್ಲಿ ಗೊತ್ತಾಗಲಿದೆ. ಯಾರ ಮತ ಡಿಲೀಟ್‌ಗೆ, ಯಾರು ಅರ್ಜಿ ಸಲ್ಲಿಸಿದ್ದಾರೆ ಎಂಬುದನ್ನು ಪಟ್ಟಿಯಲ್ಲಿ ಸ್ಪಷ್ಟವಾಗಿ ನಮೂದಿಸಲಾಗಿದೆ.

'ಯಾವುದೇ ಮತದಾರರ ನೋಂದಣಿಯನ್ನು ರದ್ದುಪಡಿಸುವ ಮುನ್ನ ಪರಿಶೀಲನೆ ನಡೆಸಿ, ಲಿಖಿತ ಕಾರಣ ನೀಡಿಯೇ ಇಆರ್‌ಒ ಕ್ರಮ ತೆಗೆದುಕೊಳ್ಳಬೇಕು. ಆದರೂ, ಮತದಾರರು ಈ ಬಗ್ಗೆ ಎಚ್ಚರಿಕೆಯಿಂದ ಇರುವುದು ಅಗತ್ಯ' ಎಂದು ರಾಜ್ಯ ಮುಖ್ಯ ಚುನಾವಣಾಧಿಕಾರಿ ಕಚೇರಿಯ ಅಧಿಕಾರಿಯೊಬ್ಬರು ತಿಳಿಸಿದರು

# ತಾಕತ್ತಿದ್ದರೆ ಕೆಪಿಎಸ್‌ಸಿ ಹಗರಣ ವಿರುದ್ಧ ಹೋರಾಡಲಿ: ಯತ್ನಾಳ್

ಒಂದು ಪಾದಯಾತ್ರೆ ಮಾಡಿದ್ರೆ ಕ್ರೆಡಿಟ್ ಬರುತ್ತಾ? ರಾಜ್ಯಾಧ್ಯಕ್ಷ ಸ್ಥಾನದಿಂದ ತೆಗೆಯುವುದು ಗ್ಯಾರಂಟಿ ಆದ ಮೇಲೆ ಪಾದಾಯಾತ್ರೆ ಗ್ಯಾರಂಟಿ ಆಗಿದೆ. ವಾರಂಟಿ ಮುಗಿದಿದೆ ಹೀಗಾಗಿ ತಮ್ಮ ಅಸ್ತಿತ್ವ ತೋರಿಸಲು, ಹೊರಟಿದ್ದಾರೆ ಎಂದು ವ್ಯಂಗ್ಯವಾಡಿದ್ದಾರೆ.

ಪಾದಯಾತ್ರೆ ಯಾರಿಗೆ ಮೈನಸ್ ಆಗುತ್ತೋ, ಪ್ಲಸ್ ಆಗುತ್ತೋ ಬಿಡುತ್ತೆ ಗೊತ್ತಿಲ್ಲ. ರಾಜ್ಯಾಧ್ಯಕ್ಷ ಸ್ಥಾನದಿಂದ ತೆಗೆಯುತ್ತಾರೆ ಎಂಬ ಭಯ ಬಂದಿದೆ. ಹೀಗಾಗಿ ಪಾದಯಾತ್ರೆಯಿಂದ ತಾವು ಹೀರೋ ಆಗಬೇಕು ಎಂದು ಇದೆಲ್ಲ ಮಾಡ್ತಿದ್ದಾರೆ. ಹೋರಾಟ, ಪಾದಯಾತ್ರೆ ಮಾಡುವುದಾದರೆ ಕೆಪಿಎಸ್‌ಸಿ ಹಗರಣ ಹೋರಾಟ ಮಾಡಲಿ ಎಂದು ತಿಳಿಸಿದ್ದಾರೆ.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹಾಗು ಸಿಎಂ ಡಿ.ಕೆ.ಶಿವಕುಮಾರ್ ಹೊಂದಾಣಿಕೆ ಮಾಡಿಕೊಂಡಿದ್ದಾರೆ ಎಂದು ಬಸನಗೌಡ ಪಾಟೀಲ್ ಯತ್ನಾಳ್ ಗಂಭೀರ ಆರೋಪ ಮಾಡಿದರು. ಸದನದಲ್ಲಿ ಬಿಡದಿ ಯೋಜನೆ, ಕೆಪಿಎಸ್ ಸಿ ಹಗರಣ ಹಾಗು ನೈಸ್ ಯೋಜನೆ ಬಗ್ಗೆ ಮಾತನಾಡಿ ಸಿಎಂ ಡಿ.ಕೆ.ಶಿವಕುಮಾರ್ ಅವರನ್ನು ಇಕ್ಕಟ್ಟಿಗೆ ಸಿಲುಕಿಸಬಹುದಿತ್ತು ಎಂದು ಹೇಳಿದರು.

ಆದರೆ ಸದನದಲ್ಲಿ ನಾಗೇಂದ್ರ ವಿಚಾರ ಪ್ರಸ್ತಾಪಿಸಿ ಧರಣಿ ನಡೆಸಲಾಯಿತು, ವಿಜಯೇಂದ್ರ ಮತ್ತು ಡಿ.ಕೆ.ಶಿವಕುಮಾರ್ ಅಡ್ಜೆಸ್ಟ್ ಮೆಂಟ್ ಮಾಡಿಕೊಂಡಿದ್ದಾರೆ ಎಂದು ಆರೋಪಿಸಿದರು.ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ಕೆಪಿಎಸ್‌ಸಿ ಹಗರಣದ ವಿರುದ್ಧ ಮಾತನಾಡಲು ಧೈರ್ಯವಿದ್ದರೆ ಪಾದಯಾತ್ರೆ ಮಾಡಲಿ ಎಂದು ಸವಾಲು ಹಾಕಿದ್ದಾರೆ. ಈ ಹಗರಣವು ರಾಜ್ಯದ ಲಕ್ಷಾಂತರ ನಿರುದ್ಯೋಗಿ ಯುವಕರ ಭವಿಷ್ಯಕ್ಕೆ ಧಕ್ಕೆ ತಂದಿದೆ ಎಂದು ಅವರು ಹೇಳಿದ್ದಾರೆ.

ಸಾವಿರಾರು ನಿರುದ್ಯೋಗಿ ಯುವಕರ ಮೇಲೆ ಪರಿಣಾಮ ಬೀರುವ ಹಗರಣದ ಹೊರತಾಗಿಯೂ, ಅಮುಖ್ಯ ವಿಷಯಗಳ ಕುರಿತು ಪಾದಯಾತ್ರೆ ನಡೆಸುತ್ತಿರುವ ವಿಜಯೇಂದ್ರ ಅವರ ಕೆಪಿಎಸ್‌ಸಿ ಅಕ್ರಮಗಳ ಬಗ್ಗೆ ಅವರ ಮೌನವನ್ನು ಪ್ರಶ್ನಿಸಿದರು.

"ಕೆಪಿಎಸ್‌ಸಿಯ ಅಮಾನತುಗೊಂಡ ಅಧ್ಯಕ್ಷ ಶಿವಶಂಕರಪ್ಪ ಸಾಹುಕರ್ ನಿಮಗೆ (ವಿಜಯೇಂದ್ರ) ಎಷ್ಟು ಶೇಕಡಾ (ಕಮಿಷನ್ ಮೊತ್ತ) ಪಾವತಿಸಿದ್ದಾರೆಂದು ನನಗೆ ತಿಳಿದಿದೆ. ವಿಜಯೇಂದ್ರ ಶೇ. 75 ರಷ್ಟು ಮತ್ತು ಸಾಹುಕರ್ ಶೇ. 25 ರಷ್ಟು ಪಡೆಯುತ್ತಾರೆ" ಎಂದು ಯತ್ನಾಳ್ ಆರೋಪಿಸಿದ್ದಾರೆ. ವಿಜಯೇಂದ್ರ ಅವರು ಪಾದಯಾತ್ರೆ ಮೂಲಕ ಕೆಪಿಎಸ್‌ಸಿ ಸಮಸ್ಯೆಯನ್ನು ಕೈಗೆತ್ತಿಕೊಳ್ಳುವ ಮೂಲಕ ತಮ್ಮ ಬದ್ಧತೆಯನ್ನು ಸಾಬೀತುಪಡಿಸಲಿ ಎಂದು ಸವಾಲು ಹಾಕಿದ್ದಾರೆ.

# ಶತಕದತ್ತ ಈರುಳ್ಳಿ ಬೆಲೆ

ಏರಿಕೆಯಾಗಿದೆ. ದೈನಂದಿನ ಅಡುಗೆಯಲ್ಲಿ ಈರುಳ್ಳಿ ಅತ್ಯವಶ್ಯಕವಾಗಿದ್ದು, ಅದರ ಬಳಕೆಯೂ ಹೆಚ್ಚಾಗಿದೆ. ಮಾರುಕಟ್ಟೆಯಲ್ಲಿ ಬೇಡಿಕೆ ಹೆಚ್ಚಾಗಿದ್ದು, ಪೂರೈಕೆ ಕಡಿಮೆಯಾಗಿರುವುದು ಬೆಲೆ ಏರಿಕೆಗೆ ಪ್ರಮುಖ ಕಾರಣವಾಗಿದೆ. ರಾಜ್ಯದಲ್ಲಿ ಮಾತ್ರವಲ್ಲದೆ ದೇಶದ ಇತರ ಭಾಗಗಳಲ್ಲೂ ಈರುಳ್ಳಿ ಬೆಲೆ ಏರಿಕೆಯಾಗಿದೆ. ಹೊರರಾಜ್ಯಗಳಿಂದ ಬೇಡಿಕೆ ಹೆಚ್ಚಿರುವುದರಿಂದಲೂ ಬೆಲೆ ಏರಿಕೆಯಾಗುತ್ತಿದೆ.

ಹಿಂಗಾರು ಬೆಳೆಯ ದಾಸ್ತಾನು ಬಹುತೇಕ ಮುಗಿದಿದ್ದು, ಹೊಸದಾಗಿ ಬರಬೇಕಿದ್ದ ಮುಂಗಾರು ಫಸಲು ವಿಳಂಬವಾಗಿದೆ. ರಾಜ್ಯದಲ್ಲಿ ಹೆಚ್ಚಾಗಿ ಈರುಳ್ಳಿ ಬೆಳೆಯುವ ಬಳ್ಳಾರಿ, ರಾಯಚೂರು, ಹುಬ್ಬಳ್ಳಿ, ಧಾರವಾಡ, ದಾವಣಗೆರೆ ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಮಳೆ ಕೊರತೆಯಿಂದ ಬಿತ್ತನೆ ಕುಂಠಿತವಾಗಿರುವುದು ಪೂರೈಕೆಯ ಮೇಲೂ ಪರಿಣಾಮ ಬೀರಿದೆ. ನೆರೆಯ ಮಹಾರಾಷ್ಟ್ರದಿಂದ ರಾಜ್ಯದ ವಿವಿಧ ಮಾರುಕಟ್ಟೆಗಳಿಗೆ ಹೆಚ್ಚಿನ ಪ್ರಮಾಣದಲ್ಲಿ ಈರುಳ್ಳಿ ಪೂರೈಕೆ-ಯಾಗುತ್ತಿತ್ತು. ಆದರೆ ಅಲ್ಲಿಯೂ ನಿರೀಕ್ಷಿತ ಪ್ರಮಾಣದಲ್ಲಿ ಫಸಲು ಮಾರುಕಟ್ಟೆಗೆ ಬಾರದ ಹಿನ್ನೆಲೆಯಲ್ಲಿ ಕೊರತೆ ಉಂಟಾಗಿದ್ದು, ರಾಜ್ಯಕ್ಕೆ ಬರುತ್ತಿದ್ದ ಈರುಳ್ಳಿ ಪೂರೈಕೆಯ ಮೇಲೂ ಪರಿಣಾಮ ಬೀರಿದೆ.

# ಅಬಕಾರಿ ಅಕ್ರಮ ಕೇಸ್: ಸಚಿವ ಸತೀಶ್ ಜಾರಕಿಹೊಳಿ ಮನೆ ಮೇಲೆ ಈಡಿ ದಾಳಿ!

ಈ ಶೋಧ ನಡೆಸಲಾಗುತ್ತಿದೆ.

ಮನೆಯಲ್ಲಿರುವ ಪ್ರಮುಖ ದಾಖಲೆಗಳು, ಆಸ್ತಿ ಪತ್ರಗಳು ಮತ್ತು ಬ್ಯಾಂಕ್ ಖಾತೆಗಳ ವಿವರಗಳನ್ನು ತೀವ್ರ ತನಿಖೆಗೆ ಒಳಪಡಿಸಲಾಗುತ್ತಿದ್ದು, ಪ್ರಮುಖ ಸಾಕ್ಷ್ಯಗಳನ್ನು ವಶಕ್ಕೆ ಪಡೆಯುವ ಸಾಧ್ಯತೆಯಿದೆ. ಸಚಿವರ ನಿವಾಸದ ಸುತ್ತಮುತ್ತ ಬಿಗಿ ಭದ್ರತೆ ಕಲ್ಪಿಸಲಾಗಿದೆ.

ವಿದೇಶದಲ್ಲಿ ಹಣ ಹೂಡಿಕೆಗೆ ಜಾರಕಿಹೊಳಿ ಸಹಾಯ ಮಾಡಿದ್ದ ಆರೋಪವಿದೆ. 3 ಕೋಟಿಯಷ್ಟು ಅಕ್ರಮ ವಿದೇಶಿ ಹಣ ಪತ್ತೆಯಾಗಿತ್ತು. ಸಚಿವರಾಗಿದ್ದಾಗ ಪ್ರಭಾವ ಬಳಸಿ 18 ಬಾರ್ ಲೈಸೆನ್ಸ್ ನೀಡಿದ್ದರು ಎನ್ನಲಾಗಿದೆ. ಬಾರ್‌ನಿಂದ ಅಕ್ರಮ ಹಣ ವರ್ಗಾವಣೆ ಆರೋಪದ ಹಿನ್ನೆಲೆ ಈಗ ದಾಳಿ ನಡೆದಿದೆ ಎಂದು ತಿಳಿದುಬಂದಿದೆ.

ಕಳೆದ ಜೂನ್ ತಿಂಗಳಿನಲ್ಲಿ ರಾಜ್ಯ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರ ಆಪ್ತ ಸಂಬಂಧಿ ಹಾಗೂ ಅಬಕಾರಿ ಇಲಾಖೆ ಅಧಿಕಾರಿಯಾಗಿದ್ದ ವೈ. ಮಂಜುನಾಥ್ ನಿವಾಸದ ಮೇಲೆ ಇಡಿ ಅಧಿಕಾರಿಗಳು ಬೃಹತ್ ದಾಳಿ ನಡೆಸಿ ಶಾಕ್ ನೀಡಿದ್ದರು.

ಬೆಳಗಿನ ಜಾವ 4 ಗಂಟೆಯಿಂದಲೇ ಪ್ಲಾನ್ ಮಾಡಿಕೊಂಡಿದ್ದ ಇಡಿ ಪಡೆ, ಬೆಳಿಗ್ಗೆ 7 ಗಂಟೆಗೆ ಸರಿಯಾಗಿ ಭದ್ರತಾ ಸಿಬ್ಬಂದಿಯೊಂದಿಗೆ ಏಕಾಏಕಿ ಬೆಂಗಳೂರಿನ ಡಾಲರ್ಸ್ ಕಾಲೋನಿ ಮನೆಯಲ್ಲಿ ಶೋಧ ಕಾರ್ಯ ಆರಂಭಿಸಿದೆ.

ಸುಮಾರು 18 ವಾಹನಗಳಲ್ಲಿ ಬಂದ 25ಕ್ಕೂ ಹೆಚ್ಚು ಅಧಿಕಾರಿಗಳ ತಂಡವು ಬೆಂಗಳೂರಿನ ಒಟ್ಟು ಆರು ಕಡೆಗಳಲ್ಲಿ ಹಾಗೂ ಬೆಳಗಾವಿ ಜಿಲ್ಲೆಯ ಗೋಕಾಕ್‌ನಲ್ಲಿರುವ ಸಚಿವರ ನಿವಾಸ ಮತ್ತು ಕಚೇರಿಗಳ ಮೇಲೂ ದಾಳಿ ನಡೆಸಿದೆ. ಪ್ರಸ್ತುತ ಸಚಿವ ಸತೀಶ್ ಜಾರಕಿಹೊಳಿ ಅವರು ಬೆಂಗಳೂರಿನ ಸರ್ಕಾರಿ ನಿವಾಸದಲ್ಲಿದ್ದು, ಅಧಿಕಾರಿಗಳು ಸ್ಥಳದಲ್ಲೇ ಸುದೀರ್ಘ ದಾಖಲೆಗಳ ಪರಿಶೀಲನೆ ನಡೆಸುತ್ತಿದ್ದಾರೆ.

# ಬ್ಲಾಕ್ ಮಾರ್ಕೆಟ್' ಕಳ್ಳನ ಮಕ್ಕಳಿಗೆ ಸಂಸ್ಕಾರ ಎಲ್ಲಿಂದ ಬರುತ್ತೆ; 'ಅಪ್ಪನಿಗೆ ಹುಟ್ಟಿದ್ರೆ ನನಗೆ ಬೂಟಿನಲ್ಲಿ ಹೊಡೆಯಲಿ': ಶಾಸಕ ಹರೀಶ್

ಜಿಲ್ಲಾ ಉಸ್ತುವಾರಿ ಸಚಿವ ಎಎಸ್ಸೆಸ್ ಮಲ್ಲಿಕಾರ್ಜುನ ಆಡಿದ ಪದಗಳು ಈಗ ಹರಿಹರದ ಬಿಜೆಪಿ ಶಾಸಕ ಬಿ.ಪಿ. ಹರೀಶ್ ಆಕ್ರೋಶ ಹೊರಹಾಕುವ ಮೂಲಕ ಇಬ್ಬರ ಮಧ್ಯೆ ಬೂದಿ ಮುಂಚಿದ ಕೆಂಡದಂತಿದ್ದ ಪರಿಸ್ಥಿತಿ ಮಂಗಳವಾರ ಸ್ಫೋಟಗೊಂಡಿದೆ.

ಹರಿಹರಕ್ಕೆ ತೆರಳಿದ್ದ ಸಚಿವ ಎಸ್‌ಎಸ್ ಮಲ್ಲಿಕಾರ್ಜುನಗೆ ಅಲ್ಲಿನ ಸ್ಥಳೀಯ ರೈತರು ಭದ್ರಾ ನೀರಿನ ವಿಚಾರದಲ್ಲಿ ಮನವಿ ಸಲ್ಲಿಕೆ ಮಾಡಿದರು. ಈ ವೇಳೆ ಶಾಸಕ ಬಿಪಿ ಹರೀಶ್ ಹೆಸರು ಉಲ್ಲೇಖಿಸಿದ್ದಕ್ಕೆ ಸಚಿವರು ಏಕಾಏಕಿ ಗರಂ ಆಗಿ ಅವಾಚ್ಯ ಶಬ್ಧ ಬಳಕೆ ಮಾಡಿ ಮೆಟ್ಟಿನಲ್ಲಿ ಹೊಡೆಯುತ್ತೀನಿ ಎಂದಿದ್ದರು. ಈ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿತ್ತು.

ಹರಿಹರ ತಾಲ್ಲೂಕಿಗೆ ನೀರಿಲ್ಲ. ಹರೀಶಣ್ಣ (ಶಾಸಕರು) ಅವರನ್ನು ಕೇಳಿದರೆ ನಿಮ್ಮ (ಸಚಿವ) ಮೇಲೆ ಹೇಳುತ್ತಿದ್ದಾರೆ ಎನ್ನುತ್ತಿದ್ದಂತೆ ಎಸ್.ಎಸ್. ಮಲ್ಲಿಕಾರ್ಜುನ್ ಕೆರಳಿದರು. ಅವನೊಬ್ಬ (ಹರೀಶ್) ಕಳ್ಳ.. ಎಂದು ಮಾತು ಆರಂಭಿಸಿದ ಸಚಿವರು ಅವಾಚ್ಯವಾಗಿ ನಿಂದಿಸಿದ್ದಾರೆ. ಸಹೋದರನಿಗೆ ಮಾತ್ರ ಅಣ್ಣ ಎಂಬ ಪ್ರೀತಿ ತೋರಿ. ಆ ವ್ಯಕ್ತಿಗೆ ಅಣ್ಣ ಎಂಬುದಾಗಿ ಕರೆಯಬೇಡಿ ಎಂದು ಏಕವಚನದಲ್ಲಿ ಶಾಸಕರ ವಿರುದ್ಧ ಹರಿಹಾಯ್ದಿದ್ದಾರೆ.

ಇನ್ನೂ ಮಲ್ಲಿಕಾರ್ಜುನ ಮಾತಿಗೆ ಕೆಂಡಾಮಂಡಲವಾಗಿರುವ ಹರೀಶ್, ಮಲ್ಲಿಕಾರ್ಜುನ್ ಭ್ರಷ್ಟಾಚಾರದ ಹಣದಲ್ಲಿ ಭ್ರಮೆಯಲ್ಲಿದ್ದಾನೆ. ಯಾರಿಗೆ ಏನು ಬೇಕಾದರೂ ಮಾತನಾಡಬಹುದು, ನಿಂದಿಸಬಹುದು ಅಂದುಕೊಂಡಿದ್ದಾನೆ. ಬೂಟಿನಲ್ಲಿ ಹೊಡೆಯುತ್ತೇನೆ ಅಂದಿದ್ದಾನೆ. ಅವರ ಅಪ್ಪ ಶಾಮನೂರು ಶಿವಶಂಕರಪ್ಪ ಹುಟ್ಟಿಬಂದರೂ ನಮ್ಮ ಮನೆತನದವರಿಗೆ ಯಾರಿಗೂ ಏನು ಮಾಡುವುದಕ್ಕೆ ಆಗಲ್ಲ.

ನಾವು ಜನರ ಮಧ್ಯೆ ಇದ್ದು, ಜನರಿಗೋಸ್ಕರ ಹೋರಾಟ ಮಾಡುತ್ತಿದ್ದೇವೆ. ಆದರೆ, ಸಚಿವರು ಅವರ ಮನೆತನ ಬೆಳೆಸಲು ಹೋರಾಟ ಮಾಡುತ್ತಿದ್ದಾರೆ. ಅವನು ಯಾರು ನನಗೆ ಬೂಟಿನಲ್ಲಿ ಹೊಡೆಯೋಕೆ. ಅದು ಸಾಧ್ಯವಿಲ್ಲ. ನನಗೆ 22 ವರ್ಷ ಇದ್ದಾಗ ದಾವಣಗೆರೆ ನಗರಸಭೆ ಸದಸ್ಯನಾಗಿದ್ದೆ. 40 ವರ್ಷಗಳ ರಾಜಕೀಯ ಅನುಭವ ಇದೆ. ಇಂತಹ ದುಷ್ಟಶಕ್ತಿಗಳನ್ನು ಸಾಕಷ್ಟು ಮಂದಿನ ಮಟ್ಟಹಾಕಿದ್ದೇನೆ ಎಂದರು.

ರೈತನೊಬ್ಬ ಹರೀಶಣ್ಣ ಎಂದು ಸಚಿವರ ಮುಂದೆ ಹೇಳಿದ್ದೇ ಅವರ ಕೋಪಕ್ಕೆ ಕಾರಣವಾಯಿತು. ಅವರ ಮನಸ್ಥಿತಿ ಹೇಗಿದೆ ಅಂದರೆ, ಅವರ ಅಪ್ಪ ಇದ್ದಾಗ ಶಂಕರಣ್ಣ ಅನ್ನಬೇಕು. ಇತನಿಗೆ ಮಲ್ಲಣ್ಣ ಅನ್ನಬೇಕು. ಬೇರೆಯಾರಿಗೂ ಅಣ್ಣಾ ಅನ್ನಬಾರದು" ಎಂದು ಸಚಿವರ ವಿರುದ್ಧ ಬಿಪಿ ಹರೀಶ್ ಕಿಡಿಕಾರಿದರು. ಅವರ ರೀತಿ ಬ್ಲಾಕ್ ಮಾರ್ಕೆಟ್ ಮಾಡಿದ ಕಳ್ಳನ ಮಕ್ಕಳಿಗೆ ಸಂಸ್ಕಾರ ಎಲ್ಲಿಂದ ಬರುತ್ತೆ. ಅವರ ತಂದೆ ಸ್ನೇಹಿತರ ಸಮಾಧಿ ಮಾಡಿ ಆಸ್ತಿ ಮಾಡಿಕೊಂಡಿದ್ದಾರೆ ಎಂದು ವಾಗ್ದಾಳಿ ನಡೆಸಿದ್ದಾರೆ.

# ಸಿಎಂ ಡಿಕೆಶಿ ಆಡಳಿತಕ್ಕೆ 100 ದಿನ

ಸೇರಿದಂತೆ ಹಲವು ನಿರ್ಧಾರಗಳನ್ನು ಕೈಗೊಳ್ಳಲಾಗಿದೆ.

ಖಾಸಗಿ ವಲಯದ ಉದ್ಯೋಗ ವಿನಿಮಯ ಕೇಂದ್ರ ಸ್ಥಾಪನೆ, 72 ಸಾವಿರ ಸರ್ಕಾರಿ ಹುದ್ದೆಗಳ ನೇಮಕಾತಿಗೆ ಆರು ತಿಂಗಳ ಗಡುವು, ಶಾಸಕರು ಹಾಗೂ ಸಚಿವರ ಒತ್ತಡಕ್ಕೆ ಮಣಿಯದೆ ಕಾನೂನು ಚೌಕಟ್ಟಿನಲ್ಲಿ ಕಾರ್ಯನಿರ್ವಹಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ.

ಗ್ಯಾರಂಟಿ ಯೋಜನೆಗಳು ಕರ್ನಾಟಕದ ನಿವಾಸಿಗಳಿಗೆ ಮಾತ್ರ ತಲುಪುವಂತೆ ಹಾಗೂ ಸೋರಿಕೆಯನ್ನು ತಡೆಯಲು ಕ್ರಮ ಕೈಗೊಳ್ಳಲಾಗಿದೆ. ರೌಡಿಗಳ ನಿಗ್ರಹಕ್ಕೆ ಜಿಲ್ಲೆಗೊಂದು ವಿಶೇಷ ಪಡೆ ರಚನೆ, ಭ್ರಷ್ಟಾಚಾರದ ವಿರುದ್ಧ ದೂರು ನೀಡಲು ದೂರವಾಣಿ ವ್ಯವಸ್ಥೆ ಹಾಗೂ ಸರ್ಕಾರಿ ಕಚೇರಿಗಳಲ್ಲಿ ಬೆಳಗ್ಗೆ 10 ಗಂಟೆಗೆ ಸಿಬ್ಬಂದಿ ಹಾಜರಾತಿ ಖಚಿತಪಡಿಸಲು ಜಿಪಿಎಸ್ ಆಧರಿತ ವ್ಯವಸ್ಥೆ ಜಾರಿಗೊಳಿಸುವ ಮೂಲಕ ಆಡಳಿತ ಸುಧಾರಣೆಗೆ ಒತ್ತು ನೀಡಲಾಗಿದೆ.

ಜನಸಾಮಾನ್ಯರನ್ನು ಕಾಡಿಸುತ್ತಿದ್ದ ಮೀಟರ್ ಬಡ್ಡಿ ದಂಧೆಗೆ ಕಡಿವಾಣ ಹಾಕಲು ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ. ನೂತನ ಸಿಎಸ್‌ಆರ್ ನೀತಿ ರೂಪಿಸಲು ಆದ್ಯತೆ ನೀಡುವುದರ ಜೊತೆಗೆ ರೈತರು ಹಾಗೂ ಬರ ನಿರ್ವಹಣೆಗೆ ವಿಶೇಷ ಒತ್ತು ನೀಡಲಾಗಿದೆ.

ಬರ ಪರಿಸ್ಥಿತಿ ಎದುರಿಸಲು ಅಧಿಕಾರಿಗಳೊಂದಿಗೆ ಸಭೆ ನಡೆಸಿ ಅಗತ್ಯ ಸಿದ್ಧತೆ ಕೈಗೊಳ್ಳಲಾಗಿದೆ. ರೈತರಿಗೆ ಸಕಾಲದಲ್ಲಿ ಬಿತ್ತನೆ ಬೀಜ ಹಾಗೂ ಗೊಬ್ಬರ ಪೂರೈಸಲು ವ್ಯವಸ್ಥೆ ಮಾಡಲಾಗಿದೆ.

ಮೊದಲ ಹಂತದಲ್ಲಿ 102 ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿದ್ದು, ವಿವಿಧ ಜಿಲ್ಲೆಗಳಲ್ಲಿ ಬರ ಪರಿಸ್ಥಿತಿಯ ಪರಿಶೀಲನೆ ನಡೆಸಲಾಗಿದೆ. ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರು ಪೂರೈಸಲು ಕ್ಷೇತ್ರಗಳಿಗೆ ತಲಾ 1 ಕೋಟಿ ರೂ. ಅನುದಾನ ನೀಡಲು ನಿರ್ಧರಿಸಲಾಗಿದೆ.

ಮಾವು ಬೆಳೆಗಾರರಿಗೆ ಹಿಂದಿನ ವರ್ಷದಂತೆ ಪ್ರೋತ್ಸಾಹಧನ ಮುಂದುವರಿಸಲು ನಿರ್ಧರಿಸಲಾಗಿದ್ದು, ಬೆಳೆ ವಿಮೆ ಬಾಕಿ ಬಿಡುಗಡೆಗೂ ಕ್ರಮ ಕೈಗೊಳ್ಳಲಾಗಿದೆ.

ಶಿಕ್ಷಣ ಮತ್ತು ಉದ್ಯೋಗ ಕ್ಷೇತ್ರಕ್ಕೂ ಸರ್ಕಾರ ಆದ್ಯತೆ ನೀಡಿದೆ. 15 ಸಾವಿರ ಶಾಲಾ ಶಿಕ್ಷಕರ ನೇಮಕಾತಿಗೆ ಅನುಮೋದನೆ ನೀಡಲಾಗಿದೆ. ಗ್ರಾಮೀಣ ಸರ್ಕಾರಿ ಶಾಲೆಗಳ ವಿದ್ಯಾರ್ಥಿಗಳಿಗೆ ವೃತ್ತಿಪರ ಕೋರ್ಸ್‌ಗಳಲ್ಲಿ ಶೇ.7.5ರಷ್ಟು ಮೀಸಲಾತಿ ಕಲ್ಪಿಸುವ ಘೋಷಣೆ ಮಾಡಲಾಗಿದೆ.

ರಾಜ್ಯದ 3,145 ವಿದ್ಯಾರ್ಥಿಗಳಿಗೆ ವಿದೇಶದಲ್ಲಿ ವ್ಯಾಸಂಗ ಮಾಡಲು ಅವಕಾಶ ಕಲ್ಪಿಸುವ 'ವಿದೇಶದಲ್ಲಿ ಅಧ್ಯಯನ-2026' ಯೋಜನೆಗೆ ಚಾಲನೆ ನೀಡಲಾಗಿದೆ. ಎಲ್ಲ ಶಾಲೆಗಳಲ್ಲಿ 6ನೇ ತರಗತಿಯಿಂದ ಎಐ ಶಿಕ್ಷಣ ಪರಿಚಯಿಸುವುದು, ಎಐ ಅಕ್ಷರ ಅಭಿಯಾನ ಹಾಗೂ ಕೋಡಿಂಗ್ ಗುರುಕುಲ ಆರಂಭಿಸುವ ಯೋಜನೆಯನ್ನೂ ಪ್ರಕಟಿಸಲಾಗಿದೆ.

# ಬರಪೀಡಿತ ಪಟ್ಟಿಗೆ ಇನ್ನೂ 25 ತಾಲೂಕುಗಳು ಸೇರ್ಪಡೆ

ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈಗಾಗಲೇ 101 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿದ್ದು, ಇತರ ಪ್ರದೇಶಗಳಲ್ಲಿ ಮೌಲ್ಯಮಾಪನ ಕಾರ್ಯ ಮುಂದುವರಿದಿದೆ ಎಂದು ಹೇಳಿದರು. ಇನ್ನೂ 25 ತಾಲೂಕುಗಳು ಬರ ಘೋಷಣೆಗೆ ಅಗತ್ಯ ಮಾನದಂಡಗಳನ್ನು ಪೂರೈಸಿದ್ದು, ಶೀಘ್ರದಲ್ಲೇ ಅವುಗಳನ್ನು ಬರಪೀಡಿತ ಎಂದು ಅಧಿಸೂಚನೆ ಹೊರಡಿಸಲಾಗುವುದು ಎಂದರು.

ಉಪಗ್ರಹ ಚಿತ್ರಗಳು, ಸ್ಥಳ ಪರಿಶೀಲನೆ ಹಾಗೂ ತಾಂತ್ರಿಕ ಅಧ್ಯಯನಗಳ ಆಧಾರದ ಮೇಲೆ ವೈಜ್ಞಾನಿಕವಾಗಿ ಬರ ಮೌಲ್ಯಮಾಪನ ನಡೆಸಲಾಗುತ್ತಿದೆ ಎಂದು ಅವರು ಹೇಳಿದರು.

ಹಂತ ಹಂತವಾಗಿ ಬರ ಮೌಲ್ಯಮಾಪನ ನಡೆಯುತ್ತಿದ್ದು, ಬರಪೀಡಿತ ಪ್ರದೇಶಗಳನ್ನು ಘೋಷಿಸುವಲ್ಲಿ ಯಾವುದೇ ವಿಳಂಬವಾಗಿಲ್ಲ. ಮುಂಗಾರು ಮತ್ತು ಹಿಂಗಾರು ಮಳೆ ಎರಡರಲ್ಲೂ ಕೊರತೆ ಇರುವವರೆಗೆ ಮೌಲ್ಯಮಾಪನ ಮುಂದುವರಿಯಲಿದೆ ಎಂದು ಅವರು ತಿಳಿಸಿದರು.

ಕಳೆದ ಬಾರಿ ಸುಮಾರು 200 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿತ್ತು. ಈ ವರ್ಷವೂ 200ಕ್ಕೂ ಹೆಚ್ಚು ತಾಲೂಕುಗಳು ಬರಪೀಡಿತವಾಗುವ ಸಾಧ್ಯತೆಯಿದೆ. ಕರಾವಳಿ ಪ್ರದೇಶ ಹೊರತುಪಡಿಸಿ ರಾಜ್ಯದ ಬಹುತೇಕ ಭಾಗಗಳಲ್ಲಿ ಬರ ಪರಿಸ್ಥಿತಿ ಇದೆ ಎಂದು ಅವರು ಹೇಳಿದರು.

ತಮ್ಮ ತಾಲೂಕುಗಳಲ್ಲಿ ತೀವ್ರ ಬರ ಪರಿಸ್ಥಿತಿ ಇದ್ದರೂ ಉದ್ದೇಶಪೂರ್ವಕವಾಗಿ ಬರಪೀಡಿತ ಪಟ್ಟಿಯಿಂದ ಕೈಬಿಡಲಾಗಿದೆ ಎಂದು ಕೆಲವು ಶಾಸಕರು ಆರೋಪಿಸಿ ಪ್ರತಿಭಟನೆ ನಡೆಸುತ್ತಿರುವ ಕುರಿತು ಪ್ರತಿಕ್ರಿಯಿಸಿದ ಪರಮೇಶ್ವರ್, ಯಾರೂ ಆತಂಕಪಡುವ ಅಗತ್ಯವಿಲ್ಲ ಎಂದು ಹೇಳಿದರು.

ಇಡೀ ರಾಜ್ಯವೇ ಇಂದು ಬರ ಪರಿಸ್ಥಿತಿ ಎದುರಿಸುತ್ತಿದೆ. ಯಾವ ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಬೇಕು ಎಂಬುದನ್ನು ನಿರ್ಧರಿಸುವಲ್ಲಿ ರಾಜ್ಯ ಸರ್ಕಾರದ ಯಾವುದೇ ವ್ಯಕ್ತಿಯ ಪಾತ್ರವಿಲ್ಲ. ಕೆಲವು ತಾಲೂಕುಗಳನ್ನು ಉದ್ದೇಶಪೂರ್ವಕವಾಗಿ ಪಟ್ಟಿಯಿಂದ ಕೈಬಿಡಲಾಗಿದೆ ಎಂಬ ಆರೋಪ ಆಧಾರರಹಿತ. ರಾಜಕೀಯ ಪಕ್ಷದ ಒಲವು ಆಧರಿಸಿ ಬರ ಪರಿಸ್ಥಿತಿ ಉಂಟಾಗುವುದಿಲ್ಲ. ಈಗಾಗಲೇ ವಿರೋಧ ಪಕ್ಷದ ಶಾಸಕರು ಪ್ರತಿನಿಧಿಸುವ ತಾಲೂಕುಗಳೂ ಪಟ್ಟಿಯಲ್ಲಿವೆ ಎಂದು ಹೇಳಿದರು. ರಾಜ್ಯ ಸರ್ಕಾರವೇ ತನ್ನದೇ ಆದ ರೀತಿಯಲ್ಲಿ ಬರಪೀಡಿತ ಪ್ರದೇಶಗಳನ್ನು ಘೋಷಿಸಿದರೆ ಕೇಂದ್ರ ಸರ್ಕಾರದಿಂದ ಪರಿಹಾರ ಪಡೆಯಲು ಸಾಧ್ಯವಾಗುವುದಿಲ್ಲ ಎಂದು ಡಿಸಿಎಂ ಹೇಳಿದರು.

ಕೇಂದ್ರದಿಂದ ಬರ ಪರಿಹಾರ ಪಡೆಯಲು ನಿಗದಿತ ಪ್ರಕ್ರಿಯೆಯನ್ನು ಅನುಸರಿಸುವುದು ಉತ್ತಮ. ಕೇಂದ್ರ ಸರ್ಕಾರದ ಮಾರ್ಗಸೂಚಿಗಳಿಗೆ ಅನುಗುಣವಾಗಿಯೇ ಬರಪೀಡಿತ ಪ್ರದೇಶಗಳನ್ನು ಘೋಷಿಸಲಾಗುತ್ತದೆ ಎಂದು ತಿಳಿಸಿದರು.

ಸಿದ್ದರಾಮಯ್ಯ ಅವರನ್ನು ಸನ್ಮಾನಿಸಲು ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಒಕ್ಕೂಟ ಇತ್ತೀಚೆಗೆ ಆಯೋಜಿಸಿದ್ದ ಕಾರ್ಯಕ್ರಮಕ್ಕೆ ಸತೀಶ್ ಜಾರಕಿಹೊಳಿ ಮತ್ತು ಡಾ ಹೆಚ್ ಸಿ ಮಹದೇವಪ್ಪ ಅವರನ್ನು ಆಹ್ವಾನಿಸಿರಲಿಲ್ಲ ಎಂಬ ವರದಿಗಳ ಹಿನ್ನೆಲೆಯಲ್ಲಿ ಅಹಿಂದ ಒಕ್ಕೂಟದಲ್ಲಿ ಭಿನ್ನಾಭಿಪ್ರಾಯ ಉಂಟಾಗಿದೆಯೇ ಎಂಬ ಪ್ರಶ್ನೆಗೆ ಪರಮೇಶ್ವರ ಸ್ಪಷ್ಟನೆ ನೀಡಿದರು. ಇತ್ತೀಚೆಗೆ ನಡೆದ ಕಾರ್ಯಕ್ರಮ ಅಹಿಂದ ಸಮಾವೇಶವಾಗಿರಲಿಲ್ಲ, ನಮ್ಮ ನಡುವೆ ಯಾವುದೇ ಒಡಕು ಇಲ್ಲ ಮತ್ತು ನಾಯಕತ್ವವೂ ವಿಭಿನ್ನ ಬಣಗಳಾಗಿ ವಿಭಜನೆಯಾಗಿಲ್ಲ ಎಂದು ಅವರು ಸ್ಪಷ್ಟಪಡಿಸಿದರು.

## ವಿದ್ಯುತ್ ನೌಕರರ ಸಂಘದ 41ನೇ ವಾರ್ಷಿಕ ಮಹಾಸಭೆ



ಮಧುಗಿರಿ : ವಿದ್ಯುತ್ ನೌಕರರ ಸಹಕಾರ ಸಂಘ ನಿಯಮಿತ, ಮಧುಗಿರಿ ವತಿಯಿಂದ 2025–26ನೇ ಸಾಲಿನ 41ನೇ ವರ್ಷದ ಸರ್ವ ಸದಸ್ಯರ ವಾರ್ಷಿಕ ಮಹಾಸಭೆ ಬುಧವಾರ ಪಟ್ಟಣದ ಕೆಇಬಿ ಕಲ್ಯಾಣ ಮಂಟಪದಲ್ಲಿ ನಡೆಯಿತು.ಸಭೆಯಲ್ಲಿ ಸಂಘದ 2025–26ನೇ ಸಾಲಿನ ವಾರ್ಷಿಕ ಚಟುವಟಿಕೆಗಳು, ಸದಸ್ಯರ ಹಿತಾಸಕ್ತಿ, ಸಂಘದ ಆಡಳಿತಾತ್ಮಕ ವಿಚಾರಗಳು ಹಾಗೂ ಮುಂದಿನ ಸಾಲಿನಲ್ಲಿ ಕೈಗೊಳ್ಳಬೇಕಾದ ವಿವಿಧ ಕಾರ್ಯಕ್ರಮಗಳ ಕುರಿತು ಚರ್ಚಿಸಲಾಯಿತು. ಸಂಘದ ಸದಸ್ಯರಿಗೆ ಅಗತ್ಯ ಸೌಲಭ್ಯ ಹಾಗೂ ಸೇವೆಗಳನ್ನು ಕಲ್ಪಿಸುವ ನಿಟ್ಟಿನಲ್ಲಿ ಸಂಘದ ಕಾರ್ಯಚಟುವಟಿಕೆಗಳನ್ನು ಮತ್ತಷ್ಟು ಪರಿಣಾಮಕಾರಿಯಾಗಿ ನಡೆಸುವ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲಾಯಿತು.

ಸಂಘದ ಅಭಿವೃದ್ಧಿಗೆ ಸದಸ್ಯರ ಸಹಕಾರ ಮತ್ತು ಸಕ್ರಿಯ ಪಾಲ್ಗೊಳ್ಳುವಿಕೆ ಅಗತ್ಯ ಎಂದು ಪದಾಧಿಕಾರಿಗಳು ತಿಳಿಸಿದರು.

ಸಂಘದ ಅಧ್ಯಕ್ಷ ರವೀಂದ್ರ ಪಿ., ಉಪಾಧ್ಯಕ್ಷ ಎಸ್. ರಾಜಶೇಖರ್, ಬೆಸ್ಕಾಂ ಕಾರ್ಯನಿರ್ವಾಹಕ ಎಂಜಿನಿಯರ್ ಜಗದೀಶ್ ಜಿ., ಕೆಪಿಟಿಸಿಎಲ್ ಕಾರ್ಯನಿರ್ವಾಹಕ ಎಂಜಿನಿಯರ್ ಹೆಚ್. ಹರೀಶ್ ಕುಮಾರ್ ಸೇರಿದಂತೆ ಅಧಿಕಾರಿಗಳು, ನೌಕರರು ಹಾಗೂ ಸಂಘದ ಪದಾಧಿಕಾರಿಗಳು ಭಾಗವಹಿಸಿದ್ದರು.

## ಹೇಮಾವತಿ ಕಾಲುವೆ ಗೇಟ್ ಕತ್ತರಿಸಿ ಕಿಡಿಗೇಡಿಗಳ ಕೃತ್ಯ: ಸಿಸಿಟಿವಿ ಕ್ಯಾಮೆರಾ ಕಳವು



ಚಿಕ್ಕನಾಯಕನಹಳ್ಳಿ: ತುಮಕೂರು ಜಿಲ್ಲೆ ಚಿಕ್ಕನಾಯಕನಹಳ್ಳಿ ತಾಲೂಕಿನ ನವಿಲೆ ಕೆರೆ ಹಾಗೂ ಸಾಸಲು ಭಾಗದ ಕೆರೆಗಳಿಗೆ ನೀರು ಹರಿಸುವ ಹೇಮಾವತಿ ನಾಲೆಯ ಗೇಟ್ ಅನ್ನು ದುಷ್ಕರ್ಮಿಗಳು ಗ್ಯಾಸ್ ಕಟ್ಟರ್‌ನಿಂದ ಕತ್ತರಿಸಿ, ಸಿಸಿಟಿವಿ ಕ್ಯಾಮೆರಾ ಕಳವು ಮಾಡಿರುವ ಘಟನೆ ಬೆಳಕಿಗೆ ಬಂದಿದೆ.

ಶಾಖಿರಿಗೆಹಳ್ಳಿಯ ನೀರಾವರಿ ಹೋರಾಟ ಸಮಿತಿಯು ಪೊಲೀಸರಿಗೆ ನೀಡಿರುವ ದೂರಿನ ಪ್ರಕಾರ, ದಿನಾಂಕ 08–09–2026ರ ರಾತ್ರಿ ವೇಳೆ ಗ್ಯಾರೇಹಳ್ಳಿ ಬಳಿ ನೀರು ವಿಭಜನೆಗಾಗಿ ಅಳವಡಿಸಲಾಗಿದ್ದ ಕಬ್ಬಿಣದ ಗೇಟನ್ನು ಕಿಡಿಗೇಡಿಗಳು ಗ್ಯಾಸ್ ಕಟ್ಟರ್ ಬಳಸಿ ತುಂಡರಿಸಿದ್ದಾರೆ. ಇದರಿಂದ ದಬ್ಬೇಘಟ್ಟ ಕೆರೆ ಭಾಗದ ಕಾಲುವೆಗೆ ನೀರು ಹರಿಯದಂತಾಗಿದ್ದು, ಆ ಭಾಗದ ರೈತರಿಗೆ ತೀವ್ರ ತೊಂದರೆಯಾಗಿದೆ. ಜೊತೆಗೆ, ಸ್ಥಳದಲ್ಲಿ ಸಮಿತಿಯ ವತಿಯಿಂದ ನಿಗಾ ವಹಿಸಲು ಅಳವಡಿಸಲಾಗಿದ್ದ ಸಿಸಿಟಿವಿ ಕ್ಯಾಮೆರಾವನ್ನೂ ಕಳವು ಮಾಡಲಾಗಿದೆ. ಘಟನೆ ಕುರಿತು ಚಿಕ್ಕನಾಯಕನಹಳ್ಳಿ ಪೊಲೀಸ್ ಠಾಣೆಗೆ ದೂರು ಸಲ್ಲಿಸಿರುವ ಹೋರಾಟ ಸಮಿತಿಯ ಮುಖಂಡರು, ಸಾರ್ವಜನಿಕ ಆಸ್ತಿಗೆ ಹಾನಿ ಮಾಡಿ ಕಳವು ಎಸಗಿರುವ ದುಷ್ಕರ್ಮಿಗಳನ್ನು ಕೂಡಲೇ ಪತ್ತೆಹಚ್ಚಿ ಕಾನೂನು ಕ್ರಮ ಜರುಗಿಸಬೇಕು ಹಾಗೂ ಕಾಲುವೆ ವ್ಯಾಪ್ತಿಯಲ್ಲಿ ಸೂಕ್ತ ಪೊಲೀಸ್ ಬಂದೋಬಸ್ತ್ ಒದಗಿಸಿ ಸಂಬಂಧಪಟ್ಟ ಕೆರೆಗಳಿಗೆ ನೀರು ಹರಿಸಲು ಅನುಕೂಲ ಮಾಡಿಕೊಡಬೇಕೆಂದು ಒತ್ತಾಯಿಸಿದ್ದಾರೆ.

## ತುಮಕೂರಿನಲ್ಲಿ ಪರಿಸರ ಸ್ನೇಹಿ ಮಣ್ಣಿನ ಗಣಪತಿ ವಿಗ್ರಹಗಳಿಗೆ ಭಾರೀ ಬೇಡಿಕೆ



ತುಮಕೂರು ನಗರದಲ್ಲಿ ಗಣೇಶ ಚತುರ್ಥಿಯ ಸಂಭ್ರಮ ಮನೆ ಮಾಡಿದ್ದು, ಈ ಬಾರಿ ಪರಿಸರ ಸ್ನೇಹಿ ಮಣ್ಣಿನ ಗಣಪತಿ ವಿಗ್ರಹಗಳಿಗೆ ಭಾರೀ ಬೇಡಿಕೆ ಕಂಡುಬರುತ್ತಿದೆ.

ಪಿಓಪಿ ಗಣಪತಿ ವಿಗ್ರಹಗಳಿಗೆ ಬದಲಾಗಿ, ಪರಿಸರ ಸಂರಕ್ಷಣೆಯ ಕಾಳಜಿಯಿಂದ ಮಣ್ಣಿನ ಗಣಪತಿಯನ್ನು ಪ್ರತಿಷ್ಠಾಪಿಸಲು ಜನರು ಹೆಚ್ಚಿನ ಆಸಕ್ತಿ ತೋರುತ್ತಿದ್ದಾರೆ. ತುಮಕೂರಿನ ಹರಳೆಪೇಟೆಯಲ್ಲಿ ಮಣ್ಣಿಗೆ ಕಲೆಯ ಸ್ಪರ್ಶ ನೀಡಿ, ಗಣಪತಿಯ ವಿವಿಧ ರೂಪಗಳಿಗೆ ಜೀವ ತುಂಬುತ್ತಿರುವ ಕಲಾವಿದ ಮನು (ಅಗಸ್ಯ) ಅವರು ಜನರ ಗಮನ ಸೆಳೆಯುತ್ತಿದ್ದಾರೆ. ಕಳೆದ ಸುಮಾರು 25 ವರ್ಷಗಳಿಂದ ಮಣ್ಣಿನ ಗಣಪತಿ ವಿಗ್ರಹಗಳನ್ನೇ ತಯಾರಿಸುತ್ತಾ ಬಂದಿರುವ ಮನು, ತಮ್ಮ ವಿಭಿನ್ನ ಕಲಾಕೌಶಲ್ಯದ ಮೂಲಕ ಪರಿಸರ ಸ್ನೇಹಿ ಗಣೇಶೋತ್ಸವಕ್ಕೆ ಹೊಸ ಮೆರುಗು ನೀಡಿದ್ದಾರೆ. ಸಣ್ಣ ಗಾತ್ರದ ವಿಗ್ರಹಗಳಿಂದ ಹಿಡಿದು, ದೊಡ್ಡದಾದ ಆಕರ್ಷಕ ಗಣಪತಿ ವಿಗ್ರಹಗಳವರೆಗೆ ಹಲವು ವಿನ್ಯಾಸಗಳಲ್ಲಿ ಗಣಪತಿಯನ್ನು ರೂಪಿಸುತ್ತಿದ್ದಾರೆ. ಮಣ್ಣನ್ನು ಹದಗೊಳಿಸಿ, ಅದಕ್ಕೆ ಕಲಾತ್ಮಕ ರೂಪ ನೀಡಿ, ಗಣಪತಿಯ ವಿಭಿನ್ನ ಭಂಗಿ, ಮುಖಭಾವ ಮತ್ತು ವಿನ್ಯಾಸಗಳಿಗೆ ಜೀವ ತುಂಬುವ ಇವರ ಕೈಚಳಕ ನಿಜಕ್ಕೂ ಗಮನ ಸೆಳೆಯುವಂತಿದೆ.

ಮಣ್ಣಿನ ಗಣಪತಿ ಎಂದರೆ ಕೇವಲ ಒಂದು ವಿಗ್ರಹವಲ್ಲ. ಅದು ನಮ್ಮ ಸಂಸ್ಕೃತಿಯ ಜೊತೆಗೆ ಪರಿಸರದ ಮೇಲಿನ ಕಾಳಜಿಯ ಪ್ರತೀಕ

ಕಳೆದ 25 ವರ್ಷಗಳಿಂದ ಮಣ್ಣಿನ ಗಣಪತಿ ವಿಗ್ರಹಗಳನ್ನು ಮಾಡುತ್ತಿದ್ದೇನೆ. ಜನರು ಪರಿಸರ ಸ್ನೇಹಿ ಗಣಪತಿಯತ್ತ ಹೆಚ್ಚಿನ ಆಸಕ್ತಿ ತೋರುತ್ತಿರುವುದು ಸಂತೋಷದ ವಿಷಯ.

ವಿಭಿನ್ನ ವಿನ್ಯಾಸಗಳಲ್ಲಿ ಗಣಪತಿ ವಿಗ್ರಹಗಳನ್ನು ತಯಾರಿಸುವ ಮೂಲಕ ಜನರಿಗೆ ಇಷ್ಟವಾಗುವಂತೆ ಮಾಡುವುದು ನಮ್ಮ ಉದ್ದೇಶ.

**ಪಿಓಪಿಗೆ ವಿದಾಯ ಹೇಳಿ :–**

ಮಣ್ಣಿನ ಗಣಪತಿಗೆ ಸ್ವಾಗತ ಕೋರುವ ಮೂಲಕ ಪರಿಸರ ಸ್ನೇಹಿ ಗಣೇಶೋತ್ಸವಕ್ಕೆ ತುಮಕೂರು ಜನತೆ ಒಲವು ತೋರುತ್ತಿದ್ದಾರೆ.

# ಯಳಂದೂರು ಪೊಲೀಸ್ ಠಾಣೆಗೆ ಬೇಕಿದೆ ಕಾಯಕಲ್ಪ

### ಇಕ್ಕಟ್ಟಿನಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳು-ಸಾರ್ವಜನಿಕರಿಗೆ ಆಸನ ಕೊರತೆ

## ಪಟ್ಟಣಕ್ಕೆ ಒಲಿದು ಬರುವುದೇಯೇ ಹೊಸ ಕಟ್ಟಡ



**ವರದಿ : ಮಲ್ಲು ಯರಗಂಬಳ್ಳಿ**

ಯಳಂದೂರು : ತಾಲೂಕಿಗೆ ಪ್ರಮುಖವಾಗಿರುವ ಪಟ್ಟಣ ಪೊಲೀಸ್ ಠಾಣೆ ಕಟ್ಟಡ ಕಿರಿದಾಗಿರುವುದರಿಂದ ಪೊಲೀಸ್ ಸಿಬ್ಬಂದಿ ಇಕ್ಕಟ್ಟಿನಲ್ಲೇ ಕಾರ್ಯನಿರ್ವಹಿಸುವ ಪರಿಸ್ಥಿತಿ ಇದೆ. ರಾಜ್ಯದ ಅತಿ ಚಿಕ್ಕ ತಾಲೂಕು ಕೇಂದ್ರವಾಗಿರುವ ಯಳಂದೂರು ತಾಲೂಕಿನಲ್ಲಿ ಪಟ್ಟಣ, ಅಗರ ಮಾಂಬಳ್ಳಿ ಸೇರಿ 2 ಪೊಲೀಸ್ ಠಾಣೆ ಹೊಂದಿದೆ.ಬಿಳಿಗಿರಿ ರಂಗನ ಬೆಟ್ಟದಲ್ಲಿ ಉಪಠಾಣೆ ಹೊಂದಿದೆ. ಇದರಲ್ಲಿ ಯಳಂದೂರು ಠಾಣೆ ಪ್ರಮುಖ ಪೊಲೀಸ್ ಠಾಣೆಯಾಗಿದೆ. ಕಟ್ಟಡ ಕಿರಿದಾಗಿರುವುದರಿಂದ ದೂರು, ದುಮ್ಮಾನ ಪರಿಹರಿಸಿಕೊಳ್ಳಲು ಬರುವ ಜನರು ಕೂರಲು ಆಸನಗಳ ವ್ಯವಸ್ಥೆ ಇಲ್ಲದೆ ನಿಂತುಕೊಂಡೆ ದೂರು ನೀಡಬೇಕಾದ ಸ್ಥಿತಿ ಇದೆ.

**ಅಪರಾಧ ಚಟುವಟಿಕೆ ಹೆಚ್ಚಳ :**

ಯಳಂದೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಅಕ್ರಮ ಚಟುವಟಿಕೆಗಳು ಹೆಚ್ಚಾಗುತ್ತಿದೆ. ಚಾಮರಾಜನಗರ ಪೂರ್ವ ಪೊಲೀಸ್ ಠಾಣೆ–ಯ ವ್ಯಾಪ್ತಿಯಲ್ಲಿದ್ದ ಇರಸವಾಡಿ, ಸುತ್ತೂರು, ಮಸಣಾಪುರ, ಚಾಟೀಪುರ, ಗಂಗವಾಡಿ, ಬೂದಂಬಳ್ಳಿಮೋಳೆ, ಬೂದಂಬಳ್ಳಿ ಸೇರಿದಂತೆ ಒಟ್ಟು 8 ಗ್ರಾಮಗಳು ಕಳೆದ 3 ವರ್ಷಗಳಿಂದ ಯಳಂದೂರು ಪೊಲೀಸ್ ಠಾಣೆ ವ್ಯಾಪ್ತಿಗೆ ಸೇರಿವೆ. ಹಾಗಾಗಿ ಇದರ ವ್ಯಾಪ್ತಿಯೂ ಕೂಡ ಹೆಚ್ಚಾಗಿದೆ. ಯಳಂದೂರು ಪಟ್ಟಣವೂ ಸೇರಿದಂತೆ ಒಟ್ಟು ಸುಮಾರು 41 ಗ್ರಾಮಗಳನ್ನು ಇದು ಒಳಗೊಂಡಿದೆ.

**ಚಿಕ್ಕ ಹಳೆಯ ಕಟ್ಟಡ :**

ಯಳಂದೂರು ಪಟ್ಟಣ ಪೊಲೀಸ್ ಠಾಣೆ ಕಟ್ಟಡವನ್ನು 1982 ರಲ್ಲಿ ನಿರ್ಮಿಸಲಾಗಿದ್ದು, 44 ವರ್ಷ ಪೂರೈಸಿರುವ 30 ಅಡಿ ಅಗಲ 40 ಅಡಿ ಉದ್ದದ ಚಿಕ್ಕ ಹಳೆಯ ಕಟ್ಟಡವಾಗಿದೆ. ಠಾಣೆಯಲ್ಲಿ ಇನ್‌ಸ್ಪೆಕ್ಟರ್, ಸಬ್ ಇನ್‌ಸ್ಪೆಕ್ಟರ್ ಸೇರಿದಂತೆ ಒಟ್ಟು 40 ಕ್ಕೂ ಹೆಚ್ಚು ಪೊಲೀಸ್ ಸಿಬ್ಬಂದಿ ಕಾರನಿರ್ವಹಿಸುತ್ತಿದ್ದಾರೆ. ಕಂಪ್ಯೂಟರ್ ಸಿಬ್ಬಂದಿ, ಬರಹಗಾರರು, ತನಿಖೆ, ನ್ಯಾಯಾಂಗ, ಕ್ರೈಂ, ಠಾಣಾಧಿಕಾರಿ, ಸ್ವಾಗತಕಾರರ ವಿಭಾಗ, ಮಹಿಳಾ ಸಿಬ್ಬಂದಿ ವಿಶ್ರಾಂತಿ ಗೃಹ ಸೇರಿದಂತೆ ಒಟ್ಟು 8 ವಿಭಾಗಗಳನ್ನು ಹೊಂದಿರುವ ಇಲಾಖೆಯಲ್ಲಿ ಪ್ರತಿಯೊಂದು ವಿಭಾಗಕ್ಕೆ ಪ್ರತ್ಯೇಕ ಸ್ಥಳ ನೀಡಬೇಕು. ಆದರೆ ಎಲ್ಲವೂ ಒಟ್ಟಾಗಿ ನಡೆಯುತ್ತಿದೆ. ಎಲ್ಲಾ ವಿಭಾಗಗಳಲ್ಲಿ ನಿತ್ಯದ ಮಾಹಿತಿ, ಕಡತಗಳನ್ನು ಇಟ್ಟು ಕೊಳ್ಳಲು ವ್ಯವಸ್ಥೆ ಇಲ್ಲದಂತಾಗಿದೆ. ಠಾಣಾಧಿಕಾರಿ ಕೊಠಡಿ, ಸಿಬ್ಬಂದಿ ಕೊಠಡಿ, ಶಸ್ತ್ರಾಸ್ತ್ರ ಕೊಠಡಿ ಎಲ್ಲವೂ ಒಂದೇ ಜಾಗದಲ್ಲಿದೆ. ಆರೋಪಿಗಳನ್ನು ಕೂರಿಸಲು ಹಾಗೂ ದಾಖಲೆಗಳನ್ನು ಇಡಲು ಸಮರ್ಪಕವಾದ ಸ್ಥಳ ಇಲ್ಲ.



ಯಳಂದೂರು ಪಟ್ಟಣ ಪೊಲೀಸ್ ಠಾಣೆ ಕಿರಿದಾಗಿದೆ. ಇದು ಹಳೆಯ ಕಟ್ಟಡವಾಗಿದೆ. ಈ ಬಗ್ಗೆ ಲೋಕೋಪಯೋಗಿ ಇಲಾಖೆ ಅಧಿಕಾರಿಗಳಿಗೆ ಪರಿಶೀಲಿಸಿ ವರದಿ ನೀಡುವಂತೆ ಸೂಚನೆ ನೀಡುತ್ತೇನೆ.ಇಲಾಖೆ ವತಿಯಿಂದ ಮೇಲಧಿಕಾರಿಗಳಿಗೆ ಪ್ರಸ್ತಾವನೆ ಸಲ್ಲಿಸಿದ್ದು ವರದಿ ಆಧಾರದ ಮೇಲೆ ನೂತನ ಕಟ್ಟಡ ನಿರ್ಮಾಣಕ್ಕೆ ಅನುದಾನ ನೀಡುವಂತೆ ಸರ್ಕಾರಕ್ಕೆ ಮನವಿ ಮಾಡಲಾಗುವುದು.

ಎ.ಆರ್.ಕೃಷ್ಣಮೂರ್ತಿ.ಶಾಸಕರು
ಕೊಳ್ಳೇಗಾಲ ವಿಧಾನ ಸಭಾ ಕ್ಷೇತ್ರ.

**ಸ್ಥಳೀಯರ ಆಗ್ರಹ :**


ಯಳಂದೂರು ಪಟ್ಟಣದಲ್ಲಿ ಪೊಲೀಸ್ ಠಾಣೆಗೆ ಸುಸಜ್ಜಿತ ಕಟ್ಟಡ ನಿರ್ಮಾಣ ಅಗತ್ಯ ಇದೆ. ಜನಪ್ರತಿನಿಧಿಗಳು ಹಾಗೂ ಪೊಲೀಸ್ ಇಲಾಖೆ ಮೇಲಾಧಿಕಾರಿಗಳು ಈ ಬಗ್ಗೆ ಕಾಳಜಿ ವಹಿಸಿ ಕ್ರಮಕೈಗೊಳ್ಳಬೇಕು ಎಂದು ಸ್ಥಳೀಯರು ಆಗ್ರಹಿಸಿದ್ದಾರೆ.

ವರ್ಷಕ್ಕೆ 250 ಕ್ಕೂ ಹೆಚ್ಚು ಎಫ್‌ಐಆರ್ ದಾಖಲಾಗುತ್ತಿದೆ.

ಜತೆಗೆ ಇಲ್ಲಿ ನಡೆಯುವ ರಾಜಕೀಯ, ಧಾರ್ಮಿಕ, ಸಾಮಾಜಿಕ ಕಾರ್ಯಕ್ರಮಗಳ ಬಂದೋಬಸ್ತ್, ಕಾನೂನು ಸುವ್ಯವಸ್ಥೆ ಸೇರಿದಂತೆ ಎಲ್ಲವನ್ನೂ ನಿರ್ವಹಿಸಬೇಕಿದೆ.

ಉಪಖಜಾನೆ, ನ್ಯಾಯಾಂಗ ಕರ್ತವ್ಯ, ಬಸ್ ನಿಲ್ದಾಣ ಬಂದೋಬಸ್ತ್, ತನಿಖಾ ಸಹಾಯಕರು, ದೇಗುಲದ ಬಂದೋಬಸ್ತ್ ಸೇರಿದಂತೆ ಇತರ ವಿಭಾಗಗಳಲ್ಲೂ ಪೊಲೀಸರು ಇದ್ದಾರೆ. ಆದ–ರೆ ಇವೆಲ್ಲವನ್ನೂ ನಿರ್ವಹಿಸಲು ಸೂಕ್ತವಾದ ಕಟ್ಟಡವಿಲ್ಲದಿರುವುದು ಕಷ್ಟವಾಗುತ್ತಿದೆ.

## ಹುಳಿಯಾರು ಗಣೇಶೋತ್ಸವದಲ್ಲಿ ಅಶಾಂತಿಗೆ ಅವಕಾಶವಿಲ್ಲ: ಪಿಎಸ್‌ಐ ರೇಣುಕಾ ಯಾದವ್



ಹುಳಿಯಾರು: ಮುಂಬರುವ ಗೌರಿ–ಗಣೇಶ ಹಬ್ಬವನ್ನು ಶಾಂತಿ ಮತ್ತು ಸೌಹಾರ್ದತೆಯಿಂದ ಆಚರಿಸುವ ಹಿನ್ನೆಲೆಯಲ್ಲಿ ಹುಳಿಯಾರು ಪೊಲೀಸ್ ಠಾಣೆಯಲ್ಲಿ ಸೌಹಾರ್ದ ಶಾಂತಿ ಸಭೆ ನಡೆಯಿತು. ಸಭೆಯ ಅಧ್ಯಕ್ಷತೆ ವಹಿಸಿದ್ದ ಪಿಎಸ್‌ಐ ರೇಣುಕಾ ಯಾದವ್ ಮಾತನಾಡಿ, ಗಣೇಶ ಮೂರ್ತಿ ಪ್ರತಿಷ್ಠಾಪಿಸುವ ಆಯೋಜಕರು ಕಡ್ಡಾಯವಾಗಿ ಪೊಲೀಸ್ ಇಲಾಖೆಯಿಂದ ಅನುಮತಿ ಪಡೆಯಬೇಕು. ಪ್ರತಿಷ್ಠಾಪನಾ ಸ್ಥಳ, ಹಬ್ಬದ ಅವಧಿ ಸೇರಿದಂತೆ ಅಗತ್ಯ ಮಾಹಿತಿಯೊಂದಿಗೆ ಆಯೋಜಕರ ಆಧಾರ್ ಕಾರ್ಡ್ ಹಾಗೂ ಭಾವಚಿತ್ರ ಸಲ್ಲಿಸಬೇಕು. ಸಾರ್ವಜನಿಕ ಸ್ಥಳಗಳಲ್ಲಿ ಪ್ರತಿಷ್ಠಾಪನೆಗೆ ಪುರಸಭೆ/ಪಟ್ಟಣ ಪಂಚಾಯಿತಿ, ಬೆಸ್ಕಾಂ, ಅಗ್ನಿಶಾಮಕ ಹಾಗೂ ಪೊಲೀಸ್ ಇಲಾಖೆಯ ಅನುಮತಿ ಪಡೆಯುವುದು ಕಡ್ಡಾಯ ಎಂದರು.

ಗಣೇಶ ಮೂರ್ತಿ ಪ್ರತಿಷ್ಠಾಪಿಸುವ ಸ್ಥಳದಲ್ಲಿ ಸಿಸಿಟಿವಿ ಕ್ಯಾಮೆರಾ ಅಳವಡಿಸುವುದರ ಜೊತೆಗೆ, ಮೂರ್ತಿಯ ಭದ್ರತೆಗಾಗಿ 24 ಗಂಟೆಯೂ ಜವಾಬ್ದಾರಿ ಸದಸ್ಯರನ್ನು ನಿಯೋಜಿಸಬೇಕು ಎಂದು ಸೂಚಿಸಿದರು.

ಡಿಜೆ ಬಳಕೆಗೆ ಅವಕಾಶವಿಲ್ಲ: ಹಬ್ಬದ ಮೆರವಣಿಗೆ ಹಾಗೂ ಕಾರ್ಯಕ್ರಮಗಳಲ್ಲಿ ಡಿಜೆ ಮತ್ತು ಭಾರಿ ಶಬ್ದದ ಸೌಂಡ್‌ಬಾಕ್ಸ್‌ಗಳನ್ನು ಬಳಸುವಂತಿಲ್ಲ. ಸಾಂಪ್ರದಾಯಿಕ ಮಂಗಳವಾದ್ಯ ಹಾಗೂ ತಮಟೆಗಳಿಗೆ ಮಾತ್ರ ಅವಕಾಶವಿದ್ದು, ಧ್ವನಿವರ್ಧಕ ಬಳಕೆಗೆ ಪೂರ್ವಾನುಮತಿ ಪಡೆಯಬೇಕು. ರಾತ್ರಿ 10 ಗಂಟೆಯ ನಂತರ ಧ್ವನಿವರ್ಧಕ ಬಳಕೆಯನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ ಎಂದು ತಿಳಿಸಿದರು.

ಬ್ಯಾನರ್ ಮತ್ತು ಫ್ಲೆಕ್ಸ್ ಅಳವಡಿಸಲು ಪಟ್ಟಣ ಪಂಚಾಯಿತಿಯಿಂದ ಅನುಮತಿ ಪಡೆಯಬೇಕು. ಹಬ್ಬ ಮುಗಿದ ಕೂಡಲೇ ಆಯೋಜಕರೇ ಅವುಗಳನ್ನು ತೆರವುಗೊಳಿಸಬೇಕು ಎಂದರು.

ಗಣೇಶ ವಿಸರ್ಜನೆಯನ್ನು ಸಾಧ್ಯವಾದಷ್ಟು ಹಗಲು ವೇಳೆಯಲ್ಲೇ ಪೂರ್ಣಗೊಳಿಸಬೇಕು. ತಡರಾತ್ರಿ ವಿಸರ್ಜನೆ ಮಾಡುವುದನ್ನು ತಪ್ಪಿಸಬೇಕು. ಮೆರವಣಿಗೆಯನ್ನು ಪೊಲೀಸರು ನಿಗದಿಪಡಿಸಿದ ಮಾರ್ಗದಲ್ಲೇ ನಡೆಸಬೇಕು ಎಂದು ಪಿಎಸ್‌ಐ ರೇಣುಕಾ ಯಾದವ್ ಸೂಚಿಸಿದರು.

ಯಾರೂ ಬಲವಂತವಾಗಿ ಚಂದಾ ವಸೂಲಿ ಮಾಡಬಾರದು. ಅಶ್ಲೀಲ ನೃತ್ಯಗಳಿಗೆ ಅವಕಾಶ ನೀಡಬಾರದು ಹಾಗೂ ಸಾರ್ವಜನಿಕ ಸಂಚಾರಕ್ಕೆ ಅಡ್ಡಿಯಾಗದಂತೆ ಪೆಂಡಾಲ್‌ಗಳನ್ನು ನಿರ್ಮಿಸಬೇಕು. ಯಾವುದೇ ಸಣ್ಣಪುಟ್ಟ ಘಟನೆಗಳು ನಡೆದರೆ ಹಿರಿಯರು ಸೌಹಾರ್ದಯುತವಾಗಿ ಬಗೆಹರಿಸಬೇಕು. ಸಮಾಜಘಾತುಕ ಚಟುವಟಿಕೆಗಳ ಕುರಿತು ತಕ್ಷಣ ಪೊಲೀಸರಿಗೆ ಮಾಹಿತಿ ನೀಡುವಂತೆ ಮನವಿ ಮಾಡಿದರು.

ಸಭೆಯಲ್ಲಿ ಎಎಸ್‌ಐ ವೆಂಕಟೇಶ್ ಸೇರಿದಂತೆ ಪೊಲೀಸ್ ಸಿಬ್ಬಂದಿ, ಗಣೇಶೋತ್ಸವ ಆಯೋಜ–ಕರು ಹಾಗೂ ವಿವಿಧ ಸಂಘಟನೆಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

## ಶಾಂತಿ, ಸೌಹಾರ್ದತೆಗೆ ಆದ್ಯತೆ ನೀಡಿ ಹಬ್ಬ ಆಚರಿಸಿ : ಎಸ್‌ಪಿ ಅಶೋಕ್



ಶಿರಾ: ಮುಂಬರುವ ಗೌರಿ ಗಣೇಶ ಹಬ್ಬವನ್ನು ಶಾಂತಿ, ಸೌಹಾರ್ದತೆ ಹಾಗೂ ಸಂಭ್ರಮದಿಂದ ಆಚರಿಸುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆ ವತಿಯಿಂದ ಶಿರಾ ನಗರದ ಕೆಇಬಿ ಶ್ರೀರಾಮ ಕಲ್ಯಾಣ ಮಂಟಪದಲ್ಲಿ ಶಾಂತಿ ಹಾಗೂ ಪೂರ್ವಭಾವಿ ಸಭೆ ನಡೆಯಿತು.

ಈ ಸಭೆಯಲ್ಲಿ ಮಾತನಾಡಿದ ತುಮಕೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ. ಅಶೋಕ್, ಹಬ್ಬದ ಸಂದರ್ಭದಲ್ಲಿ ಯುವಕರು ಹಾಗೂ ಸಾರ್ವಜನಿಕರು ಶಾಂತಿ–ಸುವ್ಯವಸ್ಥೆಗೆ ಧಕ್ಕೆಯಾಗದಂತೆ ಜವಾಬ್ದಾರಿಯುತವಾಗಿ ವರ್ತಿಸಬೇಕು ಎಂದು ಕರೆ ನೀಡಿದರು.

ಆಎ ಬಳಸಿ ಹೊಸ ಕುಡುಕರನ್ನು ಸೃಷ್ಟಿಸಬೇಡಿ. ಅದರ ಬದಲಾಗಿ ಡೊಳ್ಳು, ತಮಟೆ ಹಾಗೂ ಇತರ ಸಾಂಪ್ರದಾಯಿಕ ವಾದ್ಯಗಳೊಂದಿಗೆ ಗಣೇಶ ಹಬ್ಬವನ್ನು ಆಚರಿಸಿ ಎಂದು ಎಸ್‌ಪಿ ಕೆ.ವಿ. ಅಶೋಕ್ ಸಲಹೆ ನೀಡಿದರು.ಹಬ್ಬದ ಆಚರಣೆಯಲ್ಲಿ ಅತಿಯಾದ ಶಬ್ದ, ಅನಗತ್ಯ ಗದ್ದಲ ಹಾಗೂ ಕಾನೂನು ಸುವ್ಯವಸ್ಥೆಗೆ ಸಮಸ್ಯೆ ಉಂಟುಮಾಡುವ ಚಟುವಟಿಕೆಗಳಿಗೆ ಅವಕಾಶ ನೀಡಬಾರದು. ನಮ್ಮ ಸಂಸ್ಕೃತಿ ಮತ್ತು ಪರಂಪರೆಯನ್ನು ಪ್ರತಿಬಿಂಬಿಸುವ ರೀತಿಯಲ್ಲಿ ಹಬ್ಬವನ್ನು ಆಚರಿಸುವ ಮೂಲಕ ಸಮಾಜಕ್ಕೆ ಉತ್ತಮ ಸಂದೇಶ ನೀಡಬೇಕು ಎಂದು ಅವರು ಹೇಳಿದರು. ಅಂತರ್‌ರಾಜ್ಯ ಪರಿಸ್ಥಿತಿಯನ್ನು ಪ್ರಸ್ತಾಪಿಸಿದ ಎಸ್‌ಪಿ, ಮುಂಬೈಯಂತಹ ದೊಡ್ಡ ನಗರಗಳಿಗೆ ಹೋಲಿಕೆ ಮಾಡಿದರೆ ಬೆಂಗಳೂರು ಸೇರಿದಂತೆ ಕರ್ನಾಟಕ ರಾಜ್ಯವು ಶಾಂತಿ ಮತ್ತು ಸೌಹಾರ್ದತೆಯಲ್ಲಿ ಮುಂಚೂಣಿಯಲ್ಲಿದೆ ಎಂದು ಹೇಳಿದರು. ಕರ್ನಾಟಕದ ಜನರು ವಿವಿಧ ಧರ್ಮ, ಜಾತಿ ಹಾಗೂ ಸಮುದಾಯಗಳ ನಡುವೆಯೂ ಪರಸ್ಪರ ಗೌರವದಿಂದ ಮತ್ತು ಶಾಂತಿ–ಸೌಹಾರ್ದತೆಯಿಂದ ಬದುಕುತ್ತಿರುವುದೇ ರಾಜ್ಯದ ಹೆಗ್ಗಳಿಕೆಗೆ ಪ್ರಮುಖ ಕಾರಣವಾಗಿದೆ. ಇದೇ ವಾತಾವರಣವನ್ನು ಮುಂದುವರಿಸಿಕೊಂಡು ಹೋಗುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ತಿಳಿಸಿದರು.

ಹಬ್ಬಗಳು ಜನರನ್ನು ಒಗ್ಗೂಡಿಸುವಂತಿರಬೇಕು. ಯಾವುದೇ ಕಾರಣಕ್ಕೂ ಧಾರ್ಮಿಕ ಭಾವನೆಗಳಿಗೆ ಧಕ್ಕೆ ಉಂಟುಮಾಡುವ ಅಥವಾ ಮತ್ತೊಂದು ಸಮುದಾಯಕ್ಕೆ ತೊಂದರೆ ಉಂಟುಮಾಡುವ ರೀತಿಯಲ್ಲಿ ಆಚರಣೆ ನಡೆಯಬಾರದು ಎಂದು ಅವರು ಸೂಚಿಸಿದರು. ಗಣೇಶ ಮೆರವಣಿಗೆಗೆ ಸಂಬಂಧಿಸಿದಂತೆ ಸ್ಪಷ್ಟ ಸೂಚನೆ ನೀಡಿದ ಎಸ್‌ಪಿ ಕೆ.ವಿ. ಅಶೋಕ್, ಕಳೆದ ಬಾರಿ ಪೊಲೀಸ್ ಇಲಾಖೆ ನಿಗದಿಪಡಿಸಿದ್ದ ರೂಟ್‌ಮ್ಯಾಪ್‌ನಲ್ಲೇ ಈ ಬಾರಿಯೂ ಗಣೇಶ ಮೆರವಣಿಗೆ ನಡೆಸಬೇಕು ಎಂದು ತಿಳಿಸಿದರು.

ಯಾವುದೇ ಕಾರಣಕ್ಕೂ ಹೊಸ ಮಾರ್ಗದಲ್ಲಿ ಮೆರವಣಿಗೆ ನಡೆಸಲು ಪೊಲೀಸ್ ಇಲಾಖೆ ಅನುಮತಿ ನೀಡುವುದಿಲ್ಲ.

ಹಬ್ಬದ ಸಂದರ್ಭದಲ್ಲಿ ಸಾರ್ವಜನಿಕರಿಗೆ, ವಾಹನ ಸಂಚಾರಕ್ಕೆ ಹಾಗೂ ಇತರರಿಗೆ ತೊಂದರೆಯಾಗದಂತೆ ನಿಗದಿತ ಮಾರ್ಗವನ್ನು ಕಡ್ಡಾಯವಾಗಿ ಪಾಲಿಸಬೇಕು ಎಂದು ಅವರು ಸ್ಪಷ್ಟಪಡಿಸಿದರು. ಮೆರವಣಿಗೆಯ ವೇಳೆ ಪೊಲೀಸ್ ಇಲಾಖೆ ನೀಡುವ ಸೂಚನೆಗಳನ್ನು ಸಂಘಟಕರು ಹಾಗೂ ತಂಡದ ಸದಸ್ಯರು ಪಾಲಿಸಬೇಕು.

ಯಾವುದೇ ರೀತಿಯ ಗೊಂದಲ ಅಥವಾ ಸಂಘರ್ಷಕ್ಕೆ ಅವಕಾಶ ನೀಡದೆ, ಪೊಲೀಸ್ ಇಲಾಖೆಯೊಂದಿಗೆ ಸಹಕರಿಸುವಂತೆ ಅವರು ಮನವಿ ಮಾಡಿದರು.

ಗಣೇಶ ಮೂರ್ತಿ ಪ್ರತಿಷ್ಠಾಪನೆ, ಮೆರವಣಿಗೆ, ಧ್ವನಿವರ್ಧಕಗಳ ಬಳಕೆ ಸೇರಿದಂತೆ ಹಬ್ಬಕ್ಕೆ ಸಂಬಂಧಿಸಿದ ಎಲ್ಲ ಕಾರ್ಯಕ್ರಮಗಳಿಗೂ ಸರ್ಕಾರ ಹಾಗೂ ಪೊಲೀಸ್ ಇಲಾಖೆ ಹೊರಡಿಸಿರುವ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸಬೇಕು ಎಂದು ಅಧಿಕಾರಿಗಳು ತಿಳಿಸಿದರು.

# ಕ್ಲೈಮ್ಯಾಕ್ಸ್ ಹಂತಕ್ಕೆ ತಲುಪಿದ ಪಾದಯಾತ್ರೆ-ಬಳ್ಳಾರಿ ಜಿಲ್ಲೆಗೆ ಎಂಟ್ರಿ ಕೊಟ್ಟ ಬಿಜೆಪಿ ನಾಯಕರು



ಬಳ್ಳಾರಿ: ರಾಜ್ಯ ಸರ್ಕಾರದ ಭ್ರಷ್ಟಾಚಾರ ಖಂಡಿಸಿ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ನೇತೃತ್ವದಲ್ಲಿ ರಾಯಚೂರು ಜಿಲ್ಲೆಯ ಲಿಂಗಸಗೂರಿನಿಂದ ಆರಂಭವಾದ ಬಳ್ಳಾರಿ ಚಲೋ ಪಾದಯಾತ್ರೆ ಕ್ಲೈಮ್ಯಾಕ್ಸ್ ಹಂತಕ್ಕೆ ತಲುಪಿದೆ. ಪಾದಯಾತ್ರೆ ಇಂದು ಬಳ್ಳಾರಿ ಗ್ರಾಮೀಣ ವಿಧಾನಸಭಾ ಕ್ಷೇತ್ರಕ್ಕೆ ಎಂಟ್ರಿಕೊಟ್ಟಿದೆ. ಗುರುವಾರ ಸಂಜೆ ಬಳ್ಳಾರಿ ನಗರದ ಮುನ್ಸಿಪಲ್ ಮೈದಾನದಲ್ಲಿ ಬೃಹತ್ ಬಹಿರಂಗ ಸಮಾವೇಶ ನಡೆಯಲಿದ್ದು, 9ನೇ ದಿನವಾದ ಇಂದೂ 20 ಕಿಲೋಮೀಟರ್ ಪಾದಯಾತ್ರೆಯಲ್ಲಿ ಹೆಜ್ಜೆ ಹಾಕಿದ ಬಿಜೆಪಿ ನಾಯಕರಿಗೆ ಮಾರ್ಗಮಧ್ಯೆ ಅಭಿಮಾನಿಗಳು, ಕಾರ್ಯಕರ್ತರು ಅದ್ದೂರಿ ಸ್ವಾಗತ ಕೋರಿದರು.

ರಾಜ್ಯ ಸರ್ಕಾರದ ಭ್ರಷ್ಟಾಚಾರದ ವಿರುದ್ಧ ಹತ್ತಾರು ಬೇಡಿಕೆಗಳನ್ನ ಮುಂದಿಟ್ಟುಕೊಂಡು ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ನೇತೃತ್ವದಲ್ಲಿ ನಡೆಯುತ್ತಿರುವ ಬಳ್ಳಾರಿ ಚಲೋ ಪಾದಯಾತ್ರೆ ಕೊನೆಯ ಹಂತಕ್ಕೆ ತಲುಪಿದೆ. ಲಿಂಗಸುಗೂರಿನಿಂದ 170 ಕಿಲೋಮೀಟರ್ ಕ್ರಮಿಸಿದ ಪಾದಯಾತ್ರೆ ಇಂದು ಬಳ್ಳಾರಿ ಗ್ರಾಮೀಣ ವಿಧಾನಸಭಾ ಕ್ಷೇತ್ರಕ್ಕೆ ಪ್ರವೇಶಿಸಿದೆ.

ಪಾದಯಾತ್ರೆಯ ಮಾರ್ಗ ಮಧ್ಯದಲ್ಲೆಲ್ಲಾ ವಿಜಯೇಂದ್ರ ಸೇರಿದಂತೆ ಬಿಜೆಪಿ ನಾಯಕರಿಗೆ ಅಭಿಮಾನಿಗಳು, ಕಾರ್ಯಕರ್ತರು ಹೂಮಳೆ ಸುರಿಸಿ, ಹಾರಗಳನ್ನ ಹಾಕಿ ಅದ್ದೂರಿಯಾಗಿ ಸ್ವಾಗತ ಕೋರಲಾಯಿತು. ಈ ಮೂಲಕ ಪಾದಯಾತ್ರೆಗೆ ಮತ್ತಷ್ಟು ಮೆರಗು ನೀಡಿದರು. 9ನೇ ದಿನವಾದ ಇಂದು ಸಂಡೂರು ವಿಧಾನಸಭಾ ಕ್ಷೇತ್ರದ ಕುಡತಿನಿಯಿಂದ ಆರಂಭವಾಗಿ ಬಳ್ಳಾರಿ ಜಿಲ್ಲೆಗೆ ಎಂಟ್ರಿ ಕೊಟ್ಟಿತು. ಇಂದು 20 ಕಿಲೋಮೀಟರ್ ಪಾದಯಾತ್ರೆ ನಡೆಸಿದ ಬಿಜೆಪಿ ನಾಯಕರು ಬಳ್ಳಾರಿಗೆ ಬಳ್ಳಾರಿ ಗ್ರಾಮೀಣ ವಿಧಾನಸಭಾ ಕ್ಷೇತ್ರಕ್ಕೆ ಎಂಟ್ರಿ ಕೊಡುತ್ತಿದ್ದಂತೆ ಅದ್ದೂರಿ ಸ್ವಾಗತ ಸಿಕ್ಕಿತು.

ಬಳ್ಳಾರಿ ನಗರಕ್ಕೆ ತಲುಪಲಿರುವ ಪಾದಯಾತ್ರೆ ನಗರದ ಅಲ್ಲಿಪುರ, ಸುಧಾ ಕ್ರಾಸ್, ರೆಡಿಯೋ ಪಾರ್ಕ್, ಕೌಲ್ ಬಜಾರ್, ಮೋತಿ ಸರ್ಕಲ್, ರಾಯಲ್ ಸರ್ಕಲ್ ಮೂಲಕ ಹಾದು ಕನಕದುರ್ಗಮ್ಮ ದೇವಸ್ಥಾನಕ್ಕೆ ಪಾದಯಾತ್ರೆ ಕೊನೆಗೊಳ್ಳಲಿದೆ. ಕನಕದುರ್ಗಮ್ಮ ದೇವಸ್ಥಾನಕ್ಕೆ ಪಾದಯಾತ್ರೆ ಕೊನೆಗೊಳಿಸುವ ಬಿಜೆಪಿ ನಾಯಕರು ಇಂದು ಬೆಳಗ್ಗೆ ಮತ್ತೆ ಕನಕದುರ್ಗಮ್ಮ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿ, ಅಲ್ಲಿಂದ ವೇದಿಕೆ ಕಾರ್ಯಕ್ರಮದವರೆಗೂ ನಡೆದುಕೊಂಡೇ ಹೋಗಲಿರುವ ಬಿಜೆಪಿ ನಾಯಕರು ಸಮಾವೇಶದಲ್ಲಿ ಭಾಗಿಯಾಗಲಿದ್ದಾರೆ.

ಇನ್ನು ಪಾದಯಾತ್ರೆಯ ಮಾರ್ಗಮಧ್ಯೆ ವಿಜಯೇಂದ್ರ, ಕುಡತಿನಿ ಭೂ ಸಂತ್ರಸ್ತರ ಭೇಟಿ ಮಾಡಿ ಸಮಸ್ಯೆ ಆಲಿಸಿದ್ರು. ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ, ಸರ್ಕಾರ ನಮ್ಮ ಹೋರಾಟಕ್ಕೆ ಮಣಿದಿದೆ. ಬಿಡದಿ ಪ್ರಾಜೆಕ್ಟ್ ಬದಿಗಿಟ್ಟು ಸಿಎಂ ಬಡವರ ಬಗ್ಗೆ ಮಾತಾಡುವ ಪರಿಸ್ಥಿತಿಗೆ ಬಂದಿದ್ದಾರೆ. ಸಿಎಂ ಅವರು ಕುರ್ಚಿಯಿಂದ ಇಳಿದು ಈರುಳ್ಳಿಮೂಟೆ ಮೇಲೆ ಕೂತು ಕಾರ್ಮಿಕರ ಜೊತೆ ಸಂವಾದ ಮಾಡಿದ್ದಾರೆ. ಇವೆಲ್ಲವೂ ನಮ್ಮ ಹೋರಾಟದ ಪರಿಣಾಮ ಎಂದು ಟೀಕಾಪ್ರಹಾರ ಮಾಡಿದ್ರು.

**ಬಳ್ಳಾರಿಗೆ ಪಾದಯಾತ್ರೆ ತಲುಪಲು ಕ್ಷಣಗಣನೆ :-**

ಇರುವಂತೆಯೇ ಸರ್ಕಾರ ನಮ್ಮ ಪಾದಯಾತ್ರೆಗೆ ತೊಂದರೆ ಕೊಡಲು ಶುರು ಮಾಡಿದೆ ಎಂದು ಬಿಜೆಪಿ ನಾಯಕರು ಕಿಡಿ ಕಾರಿದ್ದಾರೆ. ನಿನ್ನೆವರೆಗೂ ಪಾದಯಾತ್ರೆಯ ಬಹಿರಂಗ ಸಮಾವೇಶಕ್ಕೆ ಸ್ಥಳ ನೀಡಲು ಜಿಲ್ಲಾಡಳಿತ ಸತಾಯಿಸಿತ್ತು. ಇದಕ್ಕೆಲ್ಲಾ ಸರ್ಕಾರದ ಕುಮ್ಮಕ್ಕೇ ಕಾರಣ ಎಂದು ಬಿಜೆಪಿ ನಾಯಕರು ಆಕ್ರೋಶ ವ್ಯಕ್ತಪಡಿಸಿದರು. ಆ ಬಳಿಕ ಕೆಲವು ಷರತ್ತುಗಳನ್ನ ಹಾಕಿ ಬಿಜೆಪಿ ನಾಯಕರು ಕೇಳಿದ್ದ ಮುನ್ಸಿಪಲ್ ಮೈದಾನವನ್ನೇ ಸಮಾವೇಶಕ್ಕೆ ಕೊಡಲಾಯಿತು. ಮತ್ತೊಂದೆಡೆ ಪಾದಯಾತ್ರೆ ಹಿನ್ನೆಲೆ ಬಳ್ಳಾರಿಯಲ್ಲಿ ಹಾಕಿದ್ದ ಬ್ಯಾನರ್ ಗಳನ್ನ ಮಹಾನಗರ ಪಾಲಿಕೆ ಸಿಬ್ಬಂದಿ ತೆರವು ಮಾಡಿದರು. ಇಂದು ಮತ್ತೇ ಬಿಜೆಪಿ ಬಾವುಟಗಳನ್ನೂ ತೆರವು ಮಾಡಲಾಗಿದೆ.

ಲಿಂಗಸಗೂರಿನಿಂದ ಪಾದಯಾತ್ರೆ ಆರಂಭಿಸಿರುವ ವಿಜಯೇಂದ್ರ ಮಾರ್ಗಮಧ್ಯದಲ್ಲಿ ಎಲ್ಲಾ ಕಡೆಗಳಲ್ಲೂ ನೊಂದ ಜನರ ಧ್ವನಿಯಾಗಿ, ಸಮಸ್ಯೆಗಳನ್ನ ಆಲಿಸುವ ಕೆಲಸ ಮಾಡಿದರು. ಪಾದಯಾತ್ರೆ ಅಂತಿಮ ಹಂತಕ್ಕೆ ಬಂದಿದ್ದು, ಇಂದು ಸಂಜೆ ಬಹಿರಂಗ ಸಮಾವೇಶ ನಡೆಯಲಿದೆ.

## ಗುಜರಾತ್‌ನಲ್ಲಿ ನಿರ್ಮಾಣ ಹಂತದ ಕಟ್ಟಡ ಕುಸಿತ, 15 ಕಾರ್ಮಿಕರು ಸಿಲುಕಿರೋ ಶಂಕೆ




ಗಾಂಧಿನಗರ: ಗುಜರಾತ್‌ನ ಗಾಂಧಿನಗರ ಸಮೀಪದ ಕುಡಾಸನ್ ಪ್ರದೇಶದಲ್ಲಿ ನಿರ್ಮಾಣ ಹಂತದಲ್ಲಿದ್ದ ಕಟ್ಟಡದ ಒಂದು ಭಾಗ ಕುಸಿದು ಬಿದ್ದಿದ್ದು, ಸುಮಾರು 10 ರಿಂದ 15 ಕಾರ್ಮಿಕರು ಅವಶೇಷಗಳಡಿ ಸಿಲುಕಿರುವ ಶಂಕೆ ವ್ಯಕ್ತವಾಗಿದೆ.

ಕಟ್ಟಡ ಕುಸಿದಿರುವ ಮಾಹಿತಿ ತಿಳಿಯುತ್ತಿದ್ದಂತೆ ಅಗ್ನಿಶಾಮಕ ದಳದ ತಂಡಗಳು ಸ್ಥಳಕ್ಕೆ ಧಾವಿಸಿದ್ದು, ರಕ್ಷಣಾ ಹಾಗೂ ಶೋಧ ಕಾರ್ಯಾಚರಣೆ ಆರಂಭಿಸಿವೆ.

ಅಧಿಕಾರಿಗಳ ಪ್ರಕಾರ, ಇದುವರೆಗೆ ಎಂಟು ಕಾರ್ಮಿಕರನ್ನು ಅವಶೇಷಗಳಿಂದ ಸುರಕ್ಷಿತವಾಗಿ ರಕ್ಷಿಸಲಾಗಿದೆ. ಇನ್ನೂ 10 ರಿಂದ 15 ಮಂದಿ ಕಟ್ಟಡದ ಅವಶೇಷಗಳಡಿ ಸಿಲುಕಿರುವ ಸಾಧ್ಯತೆ ಇರುವುದರಿಂದ ರಕ್ಷಣಾ ಕಾರ್ಯಾಚರಣೆ ಮುಂದುವರಿದಿದೆ. ಅವಶೇಷಗಳನ್ನು ತೆರವುಗೊಳಿಸಿ ಅದರೊಳಗೆ ಸಿಲುಕಿರುವವರನ್ನು ಪತ್ತೆಹಚ್ಚಲು ರಕ್ಷಣಾ ಸಿಬ್ಬಂದಿ ತೀವ್ರವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಸ್ಥಳದಲ್ಲಿ ಅಗ್ನಿಶಾಮಕ ದಳದ ತಂಡಗಳು ರಕ್ಷಣಾ ಕಾರ್ಯಾಚರಣೆಯಲ್ಲಿ ತೊಡಗಿವೆ. ಹೆಚ್ಚಿನ ಮಾಹಿತಿ ಇನ್ನಷ್ಟೇ ಲಭ್ಯವಾಗಬೇಕಿದೆ ಎಂದು ಅಗ್ನಿಶಾಮಕ ಅಧಿಕಾರಿ ರಾಜೇಶ್ ಪಟೇಲ್ ತಿಳಿಸಿದ್ದಾರೆ.

## 'ರಣಬಾಲಿ' ಚಿತ್ರದ ಟೀಸರ್ ರಿಲೀಸ್



ವಿಜಯ್ ದೇವರಕೊಂಡ, ರಶ್ಮಿಕಾ ಮಂದಣ್ಣ ಜೋಡಿಯ 'ರಣಬಾಲಿ' ಚಿತ್ರದ ಫಸ್ಟ್ ಟೀಸರ್ ರಿಲೀಸ್ ಆಗಿದೆ. 2 ನಿಮಿಷ 32 ಸೆಕೆಂಡುಗಳ ಅವಧಿಯ ಈ ಟೀಸರ್‌ನಲ್ಲಿ, ಬ್ರಿಟಿಷ್ ಪಡೆಗಳ ವಿರುದ್ಧ ಸೆಣಸಾಡುವ ಉಗ್ರ ಹಾಗೂ ಭಯಾನಕ ವ್ಯಕ್ತಿಯಾಗಿ 'ರಣಬಾಲಿ'ಯನ್ನು ಪರಿಚಯಿಸಲಾಗಿದೆ.

ರಾಯಲಸೀಮೆಯ ಹುಲಿ ಎಂದು ಕರೆಸಿಕೊಳ್ಳುವ 'ಸಿಂಗನಮಲ ಬೊಬ್ಬಿಲಿ ರಣಬಾಲಿ' ಪಾತ್ರದಲ್ಲಿ ಅಬ್ಬರಿಸಿದ್ದಾರೆ. ಪತ್ನಿ ಜಯಮ್ಮ ಪಾತ್ರದಲ್ಲಿ ರಶ್ಮಿಕಾ ಮಂದಣ್ಣ ಅಭಿನಯಿಸಿದ್ದು ರಶ್ಮಿಕಾ ಲುಕ್‌ನಲ್ಲಿ ಹೆಚ್ಚಿನ ರಹಸ್ಯ ಕಾಪಾಡಿಕೊಳ್ಳಲಾಗಿದೆ. 'ಡಿಯರ್ ಕಾಮ್ರೇಡ್' ಚಿತ್ರದ ಬಳಿಕ ಸತತ ಸೋಲನ್ನೇ ಅನುಭವಿಸುತ್ತ ಬಂದಿರುವ ವಿಜಯ್ ದೇವರಕೊಂಡಗೆ 'ರಣಬಾಲಿ' ಚಿತ್ರ ಮೇಲೆ ಬಹಳ ನಿರೀಕ್ಷೆ ಇದೆ. ಜೊತೆಗೆ ಇದು ರಶ್ಮಿಕಾ ಜೊತೆ ಮದುವೆಯಾದ ಬಳಿಕ ತೆರೆಗೆ ಬರುತ್ತಿರುವ ಮೊದಲ ಚಿತ್ರ. ಹಾಗೂ ರಶ್ಮಿಕಾ ಜೊತೆ ಅಭಿನಯಿಸಿರುವ ಚಿತ್ರ. ಸಹಜವಾಗೇ ಕಾಂಬಿನೇಷನ್ ಹಾಗೂ ಪಾತ್ರ ನಿರೀಕ್ಷೆ ಮೂಡಿಸಿದ್ದು, ಶೀಘ್ರದಲ್ಲೇ ರಿಲೀಸ್ ಆಗಲಿದೆ.

1800ರ ದಶಕದ ಅಂತ್ಯದ ಹಿನ್ನೆಲೆಯನ್ನು ಹೊಂದಿರುವ ಈ ಕಥೆಯಲ್ಲಿ, ವಿಜಯ್ ದೇವರಕೊಂಡ ಬ್ರಿಟೀಷರು ವಿರುದ್ಧ ಹೋರಾಡುವ ಯೋಧನ ಪಾತ್ರದಲ್ಲಿ ಅಬ್ಬರಿಸಿದ್ದಾರೆ. ಸಹಜವಾಗೇ ಇದು ಐತಿಹಾಸಿಕ ಕಥೆಯುಳ್ಳ ಚಿತ್ರವಾಗಿದ್ದು, ಭಾರೀ ನಿರೀಕ್ಷೆ ಮೂಡಿಸಿದೆ. ಸದ್ಯಕ್ಕೆ ರಣಬಾಲಿ ಟೀಸರ್ ಅಬ್ಬರಿಸುತ್ತಿದೆ.

## ಕರ್ನಾಟಕದ ರೈಲು ಜಾಲಕ್ಕೆ ಹೊಸ ಬಲ-ಎರಡು ರೈಲ್ವೆ ಯೋಜನೆಗಳಿಗೆ ಕೇಂದ್ರ ಅನುಮೋದನೆ



ನವದೆಹಲಿ: ಕರ್ನಾಟಕದ ರೈಲು ಮೂಲಸೌಕರ್ಯ ಹಾಗೂ ಸಂಚಾರ ಸಾಮರ್ಥ್ಯ ಹೆಚ್ಚಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಮಹತ್ವದ ಹೆಜ್ಜೆ ಇಟ್ಟಿದೆ. ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ನಡೆದ ಆರ್ಥಿಕ ವ್ಯವಹಾರಗಳ ಸಂಪುಟ ಸಮಿತಿ ಸಭೆಯಲ್ಲಿ ಒಟ್ಟು 10,021 ಕೋಟಿ ರೂ. ವೆಚ್ಚದ ಐದು ಬಹುಹಳಿ ರೈಲ್ವೆ ಯೋಜನೆಗಳಿಗೆ ಅನುಮೋದನೆ ನೀಡಿದೆ. ನಾಲ್ಕು ರಾಜ್ಯಗಳ 17 ಜಿಲ್ಲೆಗಳನ್ನು ಒಳಗೊಂಡ ಈ ಯೋಜನೆಗಳಿಂದ ರೈಲ್ವೆ ಜಾಲಕ್ಕೆ ಸುಮಾರು 540 ಕಿ.ಮೀ. ಹೆಚ್ಚುವರಿ ಮಾರ್ಗ ಸೇರ್ಪಡೆಯಾಗಲಿದೆ. ಕರ್ನಾಟಕಕ್ಕೆ ಸಂಬಂಧಿಸಿದಂತೆ ವೈಟ್‌ಫೀಲ್ಡ್ ಬಂಗಾರಪೇಟೆ 3ನೇ ಮತ್ತು 4ನೇ ಮಾರ್ಗ ಹಾಗೂ ಹೊಸೂರು-ಒಮಲೂರು ಡಬ್ಲಿಂಗ್ ಯೋಜನೆಗೆ ಅನುಮೋದನೆ ನೀಡಿದೆ. ವೈಟ್‌ಫೀಲ್ಡ್-ಬಂಗಾರಪೇಟೆ ನಡುವೆ 47 ಕಿ.ಮೀ. ಉದ್ದದ 3ನೇ ಮತ್ತು 4ನೇ ರೈಲು ಮಾರ್ಗ ನಿರ್ಮಾಣವಾಗಲಿದೆ. ಈ ಕಾಮಗಾರಿಯಿಂದ ಬೆಂಗಳೂರು-ಚೆನ್ನೈ ರೈಲು ಕಾರಿಡಾರ್‌ನಲ್ಲಿ ಸಂಚಾರ ಸಾಮರ್ಥ್ಯ ಹೆಚ್ಚಲಿದ್ದು, ಪ್ರಯಾಣಿಕ ಮತ್ತು ಸರಕು ರೈಲುಗಳ ಸಂಚಾರವನ್ನು ಹೆಚ್ಚು ಪರಿಣಾಮಕಾರಿಯಾಗಿ ನಿರ್ವಹಿಸಲು ಸಾಧ್ಯವಾಗಲಿದೆ.

# ವಿಜ್ಞಾನ ಕೇಂದ್ರಗಳಲ್ಲಿ 'ವಿದ್ಯಾರ್ಥಿ-ವಿಜ್ಞಾನಿ ಸಂವಾದ'ಕ್ಕೆ ಇಸ್ರೋ ಸಹಕಾರ ಕೋರಿದ ಸಚಿವ ಅಜಯ್ ಸಿಂಗ್



ಬೆಂಗಳೂರು: ರಾಜ್ಯದ ವಿದ್ಯಾರ್ಥಿಗಳಿಗೆ ವಿಜ್ಞಾನವನ್ನು ಪಠ್ಯಪುಸ್ತಕದ ಆಚೆಗೆ ಅನುಭವಾತ್ಮಕವಾಗಿ ಪರಿಚಯಿಸುವ ಉದ್ದೇಶದಿಂದ, ಕರ್ನಾಟಕದ ವಿವಿಧ ವಿಜ್ಞಾನ ಕೇಂದ್ರಗಳಲ್ಲಿ ಇಸ್ರೋ ವಿಜ್ಞಾನಿಗಳು ಮತ್ತು ವಿದ್ಯಾರ್ಥಿಗಳ ನಡುವೆ ನೇರ ಸಂವಾದ ಕಾರ್ಯಕ್ರಮಗಳನ್ನುಆಯೋಜಿಸಲು ಸಹಕಾರ ನೀಡುವಂತೆ ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಅಜಯ್ ಧರಂ ಸಿಂಗ್ ಇಸ್ರೋ ಅಧ್ಯಕ್ಷ ಡಾ. ವಿ. ನಾರಾಯಣನ್ ಅವರಿಗೆ ಮನವಿ ಮಾಡಿದ್ದಾರೆ.

ಇಸ್ರೋ ಅಧ್ಯಕ್ಷರನ್ನು ಭೇಟಿಯಾದ ಸಂದರ್ಭದಲ್ಲಿ ಈ ಸಂಬಂಧ ಅಧಿಕೃತ ಮನವಿ ಸಲ್ಲಿಸಿದ ಸಚಿವರು, ಬಾಹ್ಯಾಕಾಶ ವಿಜ್ಞಾನ, ಸಂಶೋಧನೆ, ಉಪಗ್ರಹ ತಂತ್ರಜ್ಞಾನ ಮತ್ತು ವಿಜ್ಞಾನ ವೃತ್ತಿಜೀವನದ ಬಗ್ಗೆ ವಿದ್ಯಾರ್ಥಿಗಳು ನೇರವಾಗಿ ವಿಜ್ಞಾನಿಗಳಿಂದ ತಿಳಿದುಕೊಳ್ಳುವ ವ್ಯವಸ್ಥೆ ರೂಪಿಸಬೇಕು ಎಂದು ಮನವಿ ಮಾಡಿದ್ದಾರೆ. ವಿದ್ಯಾರ್ಥಿಗಳು ವಿಜ್ಞಾನಿಗಳೊಂದಿಗೆ ನೇರವಾಗಿ ಸಂವಾದ ನಡೆಸಿದಾಗ ವಿಜ್ಞಾನ ಅವರಿಗೊಂದು ಪಾಠವಿಷಯವಾಗಿರದೆ, ಭವಿಷ್ಯದ ಅವಕಾಶವಾಗಿ ಕಾಣಲು ಆರಂಭಿಸುತ್ತದೆ. ಇಸ್ರೋ ವಿಜ್ಞಾನಿಗಳ ಅನುಭವ ಮತ್ತು ಸಾಧನೆಗಳು ಮಕ್ಕಳಲ್ಲಿ ಕುತೂಹಲ, ಸಂಶೋಧನಾ ಮನೋಭಾವ ಹಾಗೂ ದೊಡ್ಡ ಕನಸುಗಳನ್ನು ಹುಟ್ಟುಹಾಕಬಲ್ಲವು ಎಂದು ಡಾ. ಅಜಯ್ ಧರಂ ಸಿಂಗ್ ಹೇಳಿದ್ದಾರೆ. ವಿದ್ಯಾರ್ಥಿಗಳಲ್ಲಿ ಪ್ರಾಯೋಗಿಕ ಮತ್ತು ಸಂವಾದಾತ್ಮಕ ವಿಜ್ಞಾನ ಕಲಿಕೆಯನ್ನು ಉತ್ತೇಜಿಸಲು ರಾಜ್ಯ ಸರ್ಕಾರ ವಿಜ್ಞಾನ ಕೇಂದ್ರಗಳು, ಮೊಬೈಲ್ ಪ್ಲಾನೆಟೋರಿಯಂಗಳು ಹಾಗೂ ದೂರದರ್ಶಕ ಆಧಾರಿತ ಕಾರ್ಯಕ್ರಮಗಳನ್ನು ವಿಸ್ತರಿಸುತ್ತಿದೆ ಎಂದು ಸಚಿವರು ತಿಳಿಸಿದ್ದಾರೆ. ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಮೊಬೈಲ್ ಡಿಜಿಟಲ್ ಪ್ಲಾನೆಟೋರಿಯಂ ಕಾರ್ಯಕ್ರಮವು 3,282 ಶಾಲೆಗಳನ್ನು ತಲುಪಿದ್ದು, 5.46 ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳು ಮತ್ತು ಶಿಕ್ಷಕರು ಇದರ ಪ್ರಯೋಜನ ಪಡೆದಿದ್ದಾರೆ.

ಈ ಕಾರ್ಯಕ್ರಮಗಳ ಮುಂದುವರಿದ ಹಂತವಾಗಿ ಇಸ್ರೋ ವಿಜ್ಞಾನಿ-ವಿದ್ಯಾರ್ಥಿ ಸಂವಾದ ಆರಂಭಿಸಿದರೆ, ಬಾಹ್ಯಾಕಾಶ ವಿಜ್ಞಾನ ಮತ್ತು ತಂತ್ರಜ್ಞಾನವನ್ನು ವಿದ್ಯಾರ್ಥಿಗಳಿಗೆ ಪ್ರಾಯೋಗಿಕವಾಗಿ ಪರಿಚಯಿಸಲು ಸಾಧ್ಯವಾಗಲಿದೆ ಎಂದು ಸಚಿವರು ತಿಳಿಸಿದ್ದಾರೆ. ವಿಜ್ಞಾನವನ್ನು ಮಕ್ಕಳಿಗೆ ತೋರಿಸಬೇಕು, ಅನುಭವಿಸಬೇಕು, ಪ್ರಶ್ನಿಸಲು ಅವಕಾಶ ಕೊಡಬೇಕು. ವಿಜ್ಞಾನಿಗಳೊಂದಿಗೆ ನೇರ ಸಂವಾದವು ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಮನೋಭಾವ ಬೆಳೆಸುವುದರ ಜೊತೆಗೆ ಮುಂದಿನ ಪೀಳಿಗೆಯ ವಿಜ್ಞಾನಿಗಳು, ಸಂಶೋಧಕರು ಮತ್ತು ತಂತ್ರಜ್ಞಾನ ತಜ್ಞರನ್ನು ರೂಪಿಸಲು ನೆರವಾಗುತ್ತದೆ ಎಂದು ಅವರು ಹೇಳಿದ್ದಾರೆ.

# ಕೊಲ್ಲೂರು ಮೂಕಾಂಬಿಕಾ ದೇವಸ್ಥಾನದ ವಸತಿ ಬುಕಿಂಗ್ ಹೆಸರಲ್ಲಿ ಭಕ್ತರನ್ನು ವಂಚಿಸಲು ನಕಲಿ ವೆಬ್‌ಸೈಟ್!

ಉಡುಪಿ: ಕೊಲ್ಲೂರಿನ ಶ್ರೀ ಮೂಕಾಂಬಿಕಾ ದೇವಸ್ಥಾನದಲ್ಲಿ ರೂಂ ಬುಕ್ ಮಾಡಲು ಪ್ರಯತ್ನಿಸುವ ಭಕ್ತರನ್ನು ವಂಚಿಸಲು ನಕಲಿ ವೆಬ್‌ಸೈಟ್ ರಚಿಸಲಾಗಿದೆ ಎಂಬ ಆರೋಪದ ಮೇಲೆ ಕೊಲ್ಲೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಕೊಲ್ಲೂರು ಶ್ರೀ ಮೂಕಾಂಬಿಕಾ ದೇವಸ್ಥಾನದ ಕಾರ್ಯನಿರ್ವಾಹಕ ಅಧಿಕಾರಿ ಪ್ರಶಾಂತ್ ಕುಮಾರ್ ಶೆಟ್ಟಿ ಅವರು ಸಲ್ಲಿಸಿದ ದೂರಿನ ಪ್ರಕಾರ, ಅಪರಿಚಿತ ವ್ಯಕ್ತಿಯೊಬ್ಬ ಹೋಟೆಲ್ ಅಕಾಮಡೇಶನ್ ಹೆಸರಿನಲ್ಲಿ ಅನಧಿಕೃತ ವೆಬ್‌ಸೈಟ್ ರಚಿಸಿ ದೇವಾಲಯದ ವಸತಿ ಬುಕಿಂಗ್ ಸೇವೆಯಂತೆ ನಟಿಸಲು ಬಳಸಿದ್ದಾನೆ ಎಂದು ಆರೋಪಿಸಲಾಗಿದೆ.

ಜಗದಾಂಬಿಕಾ ಅತಿಥಿ ಗೃಹದಲ್ಲಿ ಕೊಠಡಿಗಳಿಗೆ ಬುಕಿಂಗ್ ಸ್ವೀಕರಿಸಲು ವಂಚಕರು ನಕಲಿ ವೆಬ್‌ಸೈಟ್ ಬಳಸಿದ್ದಾರೆ ಎಂದು ಆರೋಪಿಸಲಾಗಿದೆ.

ನಂತರ ಅವರು ವಾಟ್ಸಾಪ್ ಮೂಲಕ ಗ್ರಾಹಕರನ್ನು ಸಂಪರ್ಕಿಸಿ, ಪಾವತಿಗಾಗಿ ಕ್ಯೂಆರ್ ಕೋಡ್‌ಗಳನ್ನು ಹಂಚಿಕೊಂಡಿದ್ದು ಹಣ ಪಾವತಿಯಾದ ನಂತರ ನಕಲಿ ರಶೀದಿಗಳನ್ನು ನೀಡಿದರು.

ಇದನ್ನು ನಂಬಿ ದೇವಸ್ಥಾನಕ್ಕೆ ತೆರಳಿದಾಗ ಮೋಸ ಹೋಗಿರುವುದು ತಿಳಿಯಿತು ಎಂದು ವ್ಯಕ್ತಿಯೊಬ್ಬರು ಆರೋಪಿಸಿದ್ದಾರೆ.




# ಇಸ್ಕಾನ್ ದೇವಾಲಯದ 'ಕಿಚನ್ ಲೈಸೆನ್ಸ್' ರದ್ದು!

ಮುಂಬೈ: ಅಶುಚಿತ್ವ ಹಿನ್ನೆಲೆಯಲ್ಲಿ ಪ್ರತಿಷ್ಠಿತ ಇಸ್ಕಾನ್ ದೇವಾಲಯದ ಕಿಚನ್ ಲೈಸೆನ್ಸ್ ನ್ನು ರದ್ದುಗೊಳಿಸಲಾಗಿದೆ. ನಿರಂತರ ತಪಾಸಣೆಯ ಭಾಗವಾಗಿ ಆಹಾರ ಮತ್ತು ಔಷಧ ಆಡಳಿತ ಮುಂಬೈನ ಜುಹು ಪ್ರದೇಶದಲ್ಲಿರುವ ಇಸ್ಕಾನ್ ದೇವಾಲಯದ ಅಡುಗೆಮನೆಯ ಮೇಲೂ ದಾಳಿ ನಡೆಸಿದೆ. ಈಆಂ ಪರಿಶೀಲಿಸಿದ ಸ್ಥಳಗಳಲ್ಲಿ ಜುಹುವಿನ ಪ್ರಭು ರಾಧಾ ಕೃಷ್ಣ ಇಸ್ಕಾನ್ ದೇವಾಲಯದ ಅಡುಗೆಮನೆಯೂ ಸೇರಿದೆ. ದೇವಾಲಯದ 'ಗೋವಿಂದ ರೆಸ್ಟೋರೆಂಟ್'ನ ಕಿಚನ್ ನಲ್ಲಿ ಹಲವು ಲೋಪದೋಷಗಳನ್ನು ಅಧಿಕಾರಿಗಳು ಪತ್ತೆಹಚ್ಚಿದ್ದಾರೆ. ಇವುಗಳಲ್ಲಿ ಹೆಚ್ಚಿನವು ಸ್ವಚ್ಛತೆ ಮತ್ತು ನೈರ್ಮಲ್ಯಕ್ಕೆ ಸಂಬಂಧಿಸಿದವುಗಳಾಗಿವೆ. ಪರಿಶೀಲನೆಯ ನಂತರ, ರೆಸ್ಟೋರೆಂಟ್‌ಗೆ ನೋಟಿಸ್ ಜಾರಿಗೊಳಿಸಲಾಯಿತು ಮತ್ತು ಅದರ ಲೈಸೆನ್ಸ್ ರದ್ದುಪಡಿಸಲಾಯಿತು. ಈ ಪರಿಶೀಲನೆಗೆ ಪ್ರತಿಕ್ರಿಯಿಸಿರುವ ಇಸ್ಕಾನ್, ಅಧಿಕಾರಿಗಳೊಂದಿಗೆ ಸಹಕರಿಸಲು ಮತ್ತು ಅಗತ್ಯ ಸುಧಾರಣೆಗಳನ್ನು ಕೈಗೊಳ್ಳಲು ಬದ್ಧವಾಗಿರುವುದಾಗಿ ತಿಳಿಸಿದೆ.

ರೈಲು ನಿಲ್ದಾಣದ ಮಳಿಗೆಗಳ ಮೇಲೆ ಆಹಾರ ಇಲಾಖೆ ದಿಢೀರ್ ದಾಳಿ: ಅವಧಿ ಮೀರಿದ ಉತ್ಪನ್ನಗಳು, ನಿಷೇಧಿತ ಬಣ್ಣಗಳು ಪತ್ತೆ!

ಅಗತ್ಯವಿರುವ ಎಲ್ಲಾ ಮಾನದಂಡಗಳು ಮತ್ತು ನಿಯಮಗಳನ್ನು ಮತ್ತೆ ಪೂರೈಸುವವರೆಗೆ ಅಡುಗೆಮನೆಯು ಮುಚ್ಚಲ್ಪಟ್ಟಿರುತ್ತದೆ ಎಂದು ಇಸ್ಕಾನ್ ಹೇಳಿದೆ.



EDITOR : S VENKATESULU, D.NO.: 4/38, MAIN ROAD, SETTUR, ANANTHAPUR, ANDHRA PRADESH - 515767, PUBLISHER : S VENKATESULU 237, Ward No 22 Talur Road, Lingamma Compund, Bellary, Bellary, Karnataka - 583101. KARNATAKA - 583113.
OWNER : S VENKATESULU D.NO.: 4/38, MAIN ROAD, SETTUR, ANANTHAPUR, ANDHRA PRADESH - 515767. PRINTER: VADDARA DODDA VEERESH, 1ST WARD, NAYAKARA ONI, AGASARA ONI, AT/POST-SOMALAPURA, BELLARY, KARNATAKA - 583101.